ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 54 RNI Number : KNKAN/25/A2770 28-02-2026 Saturday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :54 ರಾಯಚೂರು 28-02-2026 ಶನಿವಾರ ಪುಟ 04 ಬೆಲೆ ರೂ.2/- ಮೊ:8660146563

ರೈತರಿಗೆ ಹಗಲು ವೇಳೆ 7 ಗಂಟೆ ವಿದ್ಯುತ್ ಪೂರೈಸಲು ಬದ್ಧ : ಸಚಿವ ಕೆ.ಜೆ.ಜಾರ್ಜ್

ಬೆಂಗಳೂರು,ಫೆ.27-

ರೈತರ ಕೃಷಿ ಪಂಪ್ ಸೆಟ್‌ಗಳಿಗೆ ಹಗಲು ವೇಳೆ ನಿರಂತರ 7 ಗಂಟೆ ವಿದ್ಯುತ್ ನೀಡಲು ಸರ್ಕಾರ ಬದ್ಧವಾಗಿದ್ದು, ಅದಕ್ಕಾಗಿ ಕುಸುಮ-ಸಿ ಯೋಜನೆಯಡಿ ಕೃಷಿ ಫೀಡರ್‌ಗಳ ಸೌರೀಕರಣ ಕಾರ್ಯವನ್ನು ತ್ವರಿತಗೊಳಿಸಲಾಗುತ್ತಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ.

ಪ್ರದೇಶ ಕಾಂಗ್ರೆಸ್ ಕಚೇರಿಗೆ ಶುಕ್ರವಾರ ಭೇಟಿ ನೀಡಿ ಮುಖಂಡರು ಮತ್ತು ಕಾರ್ಯಕರ್ತರ ಅಹವಾಲು ಸ್ವೀಕರಿಸಿದ ಬಳಿಕ ಮಾತನಾಡಿದ ಅವರು, ಕುಸುಮ್-ಸಿ ಯೋಜನೆ ಮೂಲಕ ಕೃಷಿಗೆ ವಿದ್ಯುತ್ ಒದಗಿಸುವ ಉಪ ಕೇಂದ್ರಗಳನ್ನು ಸೌರೀಕರಣಗೊಳಿಸಿ, 2500 ಮೆಗಾವ್ಯಾಟ್ ಸೌರ ವಿದ್ಯುತ್ ಉತ್ಪಾದಿಸುವ ಗುರಿಯೊಂದಿಗೆ ರೈತರಿಗೆ ಹಗಲು ವೇಳೆ 7 ಗಂಟೆ ವಿದ್ಯುತ್ ನೀಡಲು ಕ್ರಮ ವಹಿಸಲಾಗುತ್ತಿದೆ. ದೇಶದಲ್ಲೇ ಅತಿ ಹೆಚ್ಚು ಅದರೆ ಶೇ.80ರಷ್ಟು ಸಬ್ಸಿಡಿಯೊಂದಿಗೆ ಕುಸುಮ್-ಬಿ ಯೋಜನೆಯಡಿ ಸೋಲಾರ್ ಪಂಪ್‌ಸೆಟ್ ಒದಗಿಸುತ್ತಿದ್ದೇವೆ. ಇದು ಕೃಷಿ ಕ್ಷೇತ್ರಕ್ಕೆ ಇಂಧನ ಇಲಾಖೆಯ ಕ್ರಾಂತಿಕಾರಕ ಹೆಜ್ಜೆಯಾಗಿದೆ ಎಂದು ತಿಳಿಸಿದರು.

ರೈತರರಿಗೆ ವಿದ್ಯುತ್ ನೀಡುವ ಮೂಲಕ ಇಂಧನ ಇಲಾಖೆ ರಾಜ್ಯದ ಪ್ರಗತಿಗೆ ಮಹತ್ತರ ಕೊಡುಗೆ ನೀಡುತ್ತಿದೆ. ಗೃಹಜ್ಯೋತಿ ಯೋಜನೆಯಡಿ ಗೃಹ ಬಳಕೆದಾರರಿಗೆ 200 ಯೂನಿಟ್‌ವರೆಗೂ ಉಚಿತ ವಿದ್ಯುತ್ ನೀಡುತ್ತಿದ್ದು 1.65 ಕೋಟಿ ಕುಟುಂಬಗಳಿಗೆ ಬೆಳಕಾಗಿದೆ. ಇಂಧನ ಇಲಾಖೆ ಇರುವ ಸದಾವಕಾಶಗಳನ್ನು ಬಳಸಿಕೊಂಡು ನಾಡಿನ ಜನರ,



ಮುಖ್ಯವಾಗಿ ರೈತರ ಏಳಿಗೆಗೆ ಶ್ರಮಿಸುತ್ತಿದೆ ಎಂದರು.

ಸೌರಶಕ್ತಿಯನ್ನು ಕೃಷಿ ಚಟುವಟಿಕೆಗಳಿಗೆ ಸಂಯೋಜಿಸುವ ಮೂಲಕ ವಿದ್ಯುತ್ ಪರಿವರ್ತಕಗಳ ಮೇಲೆ ಬೀಳುತ್ತಿದ್ದ ಒತ್ತಡ ಹಾಗೂ ವಿದ್ಯುತ್ ಕಳ್ಳತನಗಳಿಗೆ ಕಡಿವಾಣ ಹಾಕಲಾಗುತ್ತಿದೆ. ವಿದ್ಯುತ್ ಉತ್ಪಾದನೆಯಲ್ಲಿ ಪಗ್ರತಿ ಸಾಧಿಸಿದ್ದು, ವಿಶ್ವಾಸಾರ್ಹ ಪ್ರಸರಣವನ್ನು ಕಾಯ್ದುಕೊಂಡಿದ್ದೇವೆ ಎಂದು ಹೇಳಿದರು.

ನಮ್ಮ ಗ್ಯಾರಂಟಿ ಯೋಜನೆಗಳು ಜನರಿಗೆ ಆರ್ಥಿಕ ಶಕ್ತಿ ನೀಡಿದೆ. ಸರ್ಕಾರ ಗ್ಯಾರಂಟಿಗಳಿಗೆ ಕಳೆದ ಸಾಲಿನಲ್ಲಿ 55,000 ಕೋಟಿ ರೂ. ಮೀಸಲಿಟ್ಟಿದೆ. ಇದರಲ್ಲಿ ಪ್ರತಿ ಕುಟುಂಬಕ್ಕೆ 5,000 ರೂ. ಸಿಗುತ್ತಿದೆ. ಪ್ರತಿಯಾಗಿ ಕರ್ನಾಟಕ ತಲಾ ಆದಾಯದಲ್ಲಿ ದೇಶದಲ್ಲೇ ನಂಬರ್ ಒನ್ ಸ್ಥಾನದಲ್ಲಿದೆ. ದುರದೃಷ್ಟವಶಾತ್ ನಾವು ಕಟ್ಟುವ ನಾಲ್ಕು ಲಕ್ಷ ಕೋಟಿ ರೂ. ತೆರಿಗೆ ಹಣದಲ್ಲಿ ಕೇಂದ್ರ ಸರ್ಕಾರ ಕೇವಲ 60,000 ಕೋಟಿ ಹಣವನ್ನು ಮಾತ್ರ ರಾಜ್ಯಕ್ಕೆ ವಾಪಸ್ ನೀಡುತ್ತಿದೆ. ನಮ್ಮ ರಾಜ್ಯದ ಅಭಿವೃದ್ದಿಗೆ ಕೇಂದ್ರವೇ ಅಡ್ಡಗಾಲಾಗಿದೆ ಎಂದು ಸಚಿವರು ಆರೋಪಿಸಿದರು.

ಬಿಜೆಪಿಯವರದ್ದು ಹುಸಿ ದೇಶಪ್ರೇಮ: ಜವಾಹರಲಾಲ್ ನೆಹರು ಅವರು ಶ್ರೀಮಂತ ಕುಟುಂಬದಿಂದ ಬಂದಿದ್ದರು. ಗಾಂಧೀಜಿ ಜೊತೆಗೆ ಜೈಲುವಾಸ ಅನುಭವಿಸಿದ್ದರು. ಬಿಜೆಪಿಯವರು ಯಾರೂ ದೇಶಕ್ಕಾಗಿ ಜೈಲು ಸೇರಿಲ್ಲ, ಹೋರಾಟ ಮಾಡಿಲ್ಲ. ಕಾಂಗ್ರೆಸ್ ಪಕ್ಷ ಹಾಗೂ ನೆಹರು ಅವರ ಪರಿಶ್ರಮ ಇವತ್ತು ಫಲಕೊಟ್ಟಿದೆ. ದೇಶ ಅಭಿವೃದ್ಧಿಯತ್ತ ದೃಢ ಹೆಜ್ಜೆಗಳನ್ನು ಇಡುತ್ತಿದೆ. ಈಗ ಅವರು ಹೋಗಿ ಸ್ವಿಚ್ ಆನ್ ಮಾಡುವ ಕೆಲಸ ಮಾಡುತ್ತಿದ್ದಾರೆ. ಚುನಾವಣೆ ಹೊತ್ತಲ್ಲಿ ಹೋಗಿ ಕೇವಲ ಭಾಷಣ ಬಿಗಿಯುತ್ತಾರೆ. ಕೇವಲ ಹುಸಿ ದೇಶ ಪ್ರೇಮದ ಪ್ರಚೋದನೆಯ ಮಾತುಗಳು ಅಷ್ಟೇ ಇವರ ಬಂಡವಾಳ ಎಂದು ಬಿಜೆಪಿ ವಿರುದ್ಧ ಹರಿಹಾಯ್ದರು.

ತಿಪ್ಪೆಗೆ ಬಿಸಾಕಿದ ಔಷಧಿಗಳು ಆರೋಗ್ಯ ಇಲಾಖೆಗೆ ಸಂಬಧಿಸಿಲ್ಲ

ರಾಯಚೂರು ಫೆಬ್ರವರಿ 27


ಇತ್ತೀಚಿಗೆ ನಗರದ ಚಂದ್ರಬಡಾ ರಸ್ತೆಯ ಜಲಾಲ್‌ನಗರ ಬಡಾವಣೆ ಬಳಿಯ ತಿಪ್ಪೆಯಲ್ಲಿ ಪತ್ತೆಯಾದ ಔಷಧಿಗಳು ಕುರಿತು ದೃಶ್ಯ ಹಾಗೂ ಮುದ್ರಣ ಮಾಧ್ಯಮಗಳಲ್ಲಿ ರಾಯಚೂರಲ್ಲಿ ಅವಧಿ ಇರುವ ಲಕ್ಷಾಂತರ ರೂಪಾಯಿ ಮೌಲ್ಯದ ಔಷಧಿಗಳು ತಿಪ್ಪೆಗೆ ಬಿಸಾಕಿದ ಸರ್ಕಾರಿ ಆಸ್ಪತ್ರೆ ಸಿಬ್ಬಂದಿ ಎನ್ನುವ ವಿಷಯವು ಪ್ರಕಟವಾಗಿದ್ದು, ಈ ಸುದ್ದಿಯು ಆರೋಗ್ಯ ಇಲಾಖೆಗೆ ಸಂಭದಿಸಿರುವುದಿಲ್ಲ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಸ್ಪಷ್ಟಿಕರಣ ನೀಡಿದ್ದಾರೆ.

ಫೆ.22ರಂದು ರಾಯಚೂರಲ್ಲಿ ಅವಧಿ ಇರುವ ಲಕ್ಷಾಂತರ ರೂಪಾಯಿ ಮೌಲ್ಯದ ಔಷಧಿಗಳು ತಿಪ್ಪೆಗೆ ಬಿಸಾಕಿದ ಸರ್ಕಾರಿ ಆಸ್ಪತ್ರೆ ಸಿಬ್ಬಂದಿ ಎನ್ನುವ ವಿಷಯವು ಪ್ರಕಟವಾಗಿರುತ್ತದೆ. ಈ ವಿಷಯದ ಗಂಭೀರತೆ ಅನ್ವಯ ತಕ್ಷಣ ಈ ಕುರಿತು ತನಿಖಾ ತಂಡವನ್ನು ರಚನೆ ಮಾಡಲಾಯಿತು.

ತಂಡವು ಔಷಧಿ ಪತ್ತೆಯಾದ ಸ್ಥಳದಲ್ಲಿ ಹಾಗೂ ಎಲ್ಲ ಔಷಧಿಗಳನ್ನು ಕೂಲಂಕುಷವಾಗಿ ಪರಿಶೀಲಿಸಿ ಅಂತಿಮ ವರದಿಯನ್ನು ಸಲ್ಲಿಸಿರುತ್ತದೆ. ಅಂತಿಮ ವರದಿಯ ಪ್ರಕಾರ ಚಂದ್ರಬಡಾ ರಸ್ತೆಯ ಜಲಾಲ್‌ನಗರ ಬಡಾವಣೆ ಬಳಿ ಬಿಸಾಕಿರುವ ಸಿರಿಂಜ್‌ಗಳು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಸಂಬಧ ಪಟ್ಟಿರುವುದಿಲ್ಲ. ಅಲ್ಲದೆ ಕೆಲವೊಂದು ಸಿರಪ್, ಟಾನಿಕ್ ಬಾಟಲ್ಸ್ ಗಳು ಸಿಕ್ಕಿದ್ದು, ಈ ವಸ್ತುಗಳು ಫೀಜಿಷಿಯನ್ ಸ್ಯಾಂಪಲ್ ಇರುವುದು ಕಂಡುಬಂದಿದ್ದು, ಈ ಔಷಧಿಗಳೆಲ್ಲವು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಸಂಬಧಪಟ್ಟಿಲ್ಲವೆದು ಪ್ರಾಥಮಿಕ ವರದಿಯಲ್ಲಿ ತಿಳಿಸಲಾಗಿದೆ.

ಈ ಕುರಿತು ಸಹಾಯಕ ಔಷಧ ನಿಯಂತ್ರಕ ಅಧಿಕಾರಿಗಳು ಕಚೇರಿ ಹಾಗೂ ಪರಿಸರ ಮಾಲಿನ್ಯ ಇಲಾಖೆ ವತಿಯಿಂದ ಮುಂದಿನ ಕ್ರಮ ತೆಗೆದುಕೊಳ್ಳುವವರು ಎಂದು ವರದಿಯಲ್ಲಿ ತಿಳಿಸಲಾಗಿದ್ದು, ಮಾಧ್ಯಮಗಳಲ್ಲಿ ಪ್ರಕಟವಾಗಿರುವ ಸುದ್ದಿಯು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಸಂಬಧಿಸಿರುವುದಿಲ್ಲ ಡಾ ಸುರೇಂದ್ರ ಬಾಬು ಅವರು ಪ್ರಕಟಣೆಯಲ್ಲಿ ಸ್ಪಷ್ಟೀಕರಣವನ್ನು ನೀಡಿದ್ದಾರೆ.

ಹಟ್ಟಿ ಚಿನ್ನದ ಗಣಿ ಕಂಪನಿ ಮುಖ್ಯದ್ವಾರದ ಬಳಿ ಸ್ಫೋಟಕಗಳು ವಸ್ತುಗಳು ಪತ್ತೆ ?



ಲಿಂಗಸುಗೂರು. ಫೆ.27-

ಲಿಂಗಸುಗೂರು ತಾಲ್ಲೂಕಿನ ಹಟ್ಟಿ ಚಿನ್ನದ ಗಣಿ ಕಂಪನಿ ಮುಖ್ಯ ದ್ವಾರದ ಬಳಿ ಸ್ಫೋಟಕ ವಸ್ತುಗಳಾದ ಮದ್ದು ಗುಂಡುಗಳು ರಸ್ತೆ ಮೇಲೆ ಬಿದ್ದಿರುವ ಘಟನೆ ಶುಕ್ರವಾರ ಬೆಳಗ್ಗೆ ಬೆಳಕಿಗೆ ಬಂದಿದೆ.

ಅಪರಿಚಿತರು ಅಕ್ರಮವಾಗಿ ಸಾಗಿಸುವ ವೇಳೆ ಈ ಮದ್ದು ಗುಂಡುಗಳು ಕೆಳಗೆ ಬಿದ್ದಿರುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಪ್ರಾಥಮಿಕ ಮಾಹಿತಿ ಪ್ರಕಾರ ಸ್ಫೋಟಕ

4 ನೇ ಪುಟಕ್ಕೆ...

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯತ್ವ ನವೀಕರಣ ಹಾಗೂ ಹೊಸ ಸದಸ್ಯತ್ವಕ್ಕೆ ಅರ್ಜಿ ಆಹ್ವಾನ: ಆರ್ ಗುರುನಾಥ

ರಾಯಚೂರು,ಫೆ.27-



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ 2026-27ನೇ ಸಾಲಿನ ಸದಸ್ಯತ್ವ ನವೀಕರಣ ಮತ್ತು ಹೊಸ ಸದಸ್ಯತ್ವ ಪಡೆಯಲು ರಾಜ್ಯ ಸಮಿತಿಯ ನಿರ್ದೇಶನದ ಮೇರೆಗೆ ರಾಯಚೂರು ಜಿಲ್ಲಾ ಸಮಿತಿಯಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಮಾ.1ರಿಂದ ಆಯಾ ತಾಲೂಕಿನ ಅಧ್ಯಕ್ಷರಿಗೆ ಅರ್ಜಿ ಸಲ್ಲಿಸಲು ಈ ಮೂಲಕ ತಿಳಿಸಲಾಗಿದೆ. ರಾಯಚೂರು ನಗರ ವ್ಯಾಪ್ತಿಯ ಪತ್ರಕರ್ತರು ನಗರದ ಪತ್ರಿಕಾ ಭವನದಲ್ಲಿ ಅರ್ಜಿಗಳನ್ನು ಪಡೆಯಬಹುದು.

ಅರ್ಜಿ ನವೀಕರಣ ಅಥವ ನೂತನ ಸದಸ್ಯತ್ವ ಪಡೆಯಲು ಹಿಂದಿನ ವರ್ಷದ ಸಂಘದ ಕಾರ್ಡ್, ಸಂಪಾದಕರು ಅಥವ ಮಾಧ್ಯಮ ಸಂಸ್ಥೆಗಳು ನೀಡಿದ ಆದೇಶ ಪ್ರತಿ, ಆಧಾರ್ ಕಾರ್ಡ್, ಎರಡು ಭಾವಚಿತ್ರ ಮತ್ತು 510 ರೂ. ಶುಲ್ಕದೊಂದಿಗೆ ಅರ್ಜಿ ಸಲ್ಲಿಸತಕ್ಕದ್ದು. ಅರ್ಜಿ ಸಲ್ಲಿಸಲು ಮಾ.8 ಕೊನೆ ದಿನವಾಗಿದೆ.

ತಾಲೂಕು ಮಟ್ಟದಲ್ಲಿ ಸಲ್ಲಿಕೆಯಾದ ಅರ್ಜಿಗಳನ್ನು ಆಯಾ ತಾಲೂಕು ಘಟಕಗಳ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು ಸೇರಿದಂತೆ ಪದಾಧಿಕಾರಿಗಳು ಪರಾಮರ್ಶೆ ನಡೆಸಿ ಮಾ.10ರೊಳಗೆ ಅರ್ಜಿ ಮತ್ತು ಶುಲ್ಕದ

4 ನೇ ಪುಟಕ್ಕೆ...

ಕುಲಬಹಿಷ್ಕಾರದಿಂದ ಸಂಕಷ್ಟದಲ್ಲಿರುವ ಕುಟುಂಬ: ಕ್ರಮಕ್ಕೆ ಜಿಲ್ಲಾಡಳಿತಕ್ಕೆ ಮನವಿ



ರಾಯಚೂರು, ಫೆ.27: ಮೇದಾರ ಜನಾಂಗಕ್ಕೆ ಸೇರಿದ ರಾಜಶೇಖರ ಹಾಗೂ ಅವರ ಕುಟುಂಬಕ್ಕೆ ಸಮಾಜದಿಂದ ವಿಧಿಸಲಾದ ಕುಲಬಹಿಷ್ಕಾರದಿಂದಾಗಿ ಸಾಮಾಜಿಕ ಬಹಿಷ್ಕಾರ, ಮಾನಸಿಕ ಒತ್ತಡ ಮತ್ತು ಆರ್ಥಿಕ ಸಂಕಷ್ಟ ಎದುರಾಗಿದ್ದು, ನ್ಯಾಯ ಒದಗಿಸುವಂತೆ ನೊಂದ ವ್ಯಕ್ತಿ ರಾಜಶೇಖರ್ ತಿಳಿಸಿದರು.

ಅವರಿಂದು ನಗರದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದವರು 26-10-2014 ರಂದು ಸಮಾಜದ ಸಭೆಯಲ್ಲಿ ಆಸ್ತಿ ಹಂಚಿಕೆ ವಿಚಾರಕ್ಕೆ ಸಂಬಂಧಿಸಿದಂತೆ ತಮ್ಮನ್ನು ಕರೆಯದೇ ಕುಲಬಹಿಷ್ಕಾರ ನಿರ್ಣಯ ಕೈಗೊಂಡಿದ್ದು, ನಂತರ ಕುಟುಂಬವನ್ನು ಮದುವೆ ಸೇರಿದಂತೆ ಯಾವುದೇ ಸಾಮಾಜಿಕ ಕಾರ್ಯಕ್ರಮಗಳಿಗೆ ಆಹ್ವಾನಿಸದಂತೆ ತೀರ್ಮಾನ ಮಾಡಲಾಗಿದೆ ಎಂದು ದೂರಿದರು. ಇದರಿಂದ ಕುಟುಂಬ ಹಲವು ವರ್ಷಗಳಿಂದ ಸಾಮಾಜಿಕವಾಗಿ ದೂರವಿದ್ದು ಸಂಕಷ್ಟ ಅನುಭವಿಸುತ್ತಿದೆ ಎಂದರು.

ಕುಲಬಹಿಷ್ಕಾರ ಬಳಿಕ 10-10-2016 ರಂದು ದೇವಸ್ಥಾನ ದರ್ಶನಕ್ಕೆ ತೆರಳಿದ ವೇಳೆ ತಮ್ಮನಾದ ರಮೇಶ ಕಬ್ಬಿಣದ ರಾಡಿನಿಂದ ತಲೆಗೆ ಹೊಡೆದು ಕೊಲೆ ಯತ್ನ ನಡೆಸಿದ್ದು, ರಿಮ್ಸ್ ಆಸ್ಪತ್ರೆಗೆ ದಾಖಲಾಗಿದ್ದೆನು. ಈ ಸಂಬಂಧ ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು ಎಂದು ವಿವರಿಸಿದರು.

ನಂತರ ಕುಟುಂಬ ಕಲಹದ ಹಿನ್ನೆಲೆ ತಾಯಿಗೆ ಜೀವನಾಂಶವಾಗಿ ಪ್ರತಿ ತಿಂಗಳು ₹2500 ಪಾವತಿಸುವಂತೆ ನ್ಯಾಯಾಲಯ

4 ನೇ ಪುಟಕ್ಕೆ...

ಕಾರ್ಮಿಕ ಇಲಾಖೆಯಿಂದ ತ್ರಿಚಕ್ರ ವಾಹನವನ್ನು ವಿತರಣೆ

ರಾಯಚೂರು ಫೆ.27

ಕಾರ್ಮಿಕ ಇಲಾಖೆಯ ವತಿಯಿಂದ ವಿವಿಧ ಕಂಪನಿಗಳು, ಕೈಗಾರಿಕೆಗಳು ಹಾಗೂ ಇತರೇ ವಾಣಿಜ್ಯ ಸಂಸ್ಥೆಗಳ ಪ್ರಾಯೋಜಕತ್ವದ ಮತ್ತು ಸಹಯೋಗದೊಂದಿಗೆ ಕಾರ್ಮಿಕ ಸಚಿವರು ಸಂತೋಷ ಲಾಡ್ ಅವರು ಫೆ.27ರಂದು ರಾಜ್ಯದಾದ್ಯಂತ ಅರ್ಹ ವಿಕಲಚೇತನರಿಗೆ ಮೋಟಾರ್ ಸಹಿತ ತ್ರಿಚಕ್ರ ವಾಹನಗಳನ್ನು ವಿತರಿಸಲು ಕಾರ್ಯಕ್ರಮದ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಜಿಲ್ಲಾಡಳಿತ, ಕಾರ್ಮಿಕ ಇಲಾಖೆ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ರಾಯಚೂರು, ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ರಾಯಚೂರು ಇವರ ವತಿಯಿಂದ ಕುಮಾರೆಮ್ಮ



ತಂದೆ ಮಾರೆಪ್ಪ ಇವರಿಗೆ ತ್ರಿಚಕ್ರ ವಾಹನವನ್ನು ವಿತರಿಸಲಾಯಿತು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಕಾರ್ಮಿಕ ಇಲಾಖೆಯ ಜಿಲ್ಲಾ ಅಧಿಕಾರಿ ಆರತಿ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀದೇವಿ, ರಾಯಚೂರಿನ 1 ಹಾಗೂ 2ನೇ ಕಾರ್ಮಿಕ ನಿರೀಕ್ಷಕರಾದ ಕುಮಾರಿ ಪ್ರಿಯಾಂಕ, ಮೆ ಪವರ್‌ಮೆಕ್ ಪ್ರಾಜೆಕ್ಟ್ ಲಿಮಿಟೆಡಿನ ಹೆಚ್.ಆರ್. ಮನೋಜ ಸೇರಿದಂತೆ ಕಾರ್ಮಿಕ ಇಲಾಖೆಯ ಸಿಬ್ಬಂದಿಗಳು ಇದ್ದರು.

ವಿವಿಧ ಬೇಡಿಕೆಗಳ ಪರಿಹಾರಕ್ಕಾಗಿ ಪ್ರಾಂತ ರೈತ ಸಂಘ ಧರಣಿ

ದೇವದುರ್ಗ.ಫೆ.26-

ತಾಲೂಕಿನ ವಿವಿಧ ಗ್ರಾಮ ಪಂಚಾಯತಿಗಳಲ್ಲಿ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ಮನರೇಗಾ) ಸಮರ್ಪಕವಾಗಿ ಜಾರಿಯಾಗುತ್ತಿಲ್ಲವೆಂದು ಆರೋಪಿಸಿ, ಕರ್ನಾಟಕ ಪ್ರಾಂತ ರೈತ ಸಂಘ ತಾಲೂಕು ಸಮಿತಿ ವತಿಯಿಂದ ಗುರುವಾರ ದೇವದುರ್ಗ ತಾಲೂಕು ಪಂಚಾಯತ್ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸಲಾಯಿತು.



ತಾಲೂಕಿನ 33 ಗ್ರಾಮ ಪಂಚಾಯತಿಗಳಲ್ಲಿ ಕೆಲಸಕ್ಕಾಗಿ ಅರ್ಜಿ ಸಲ್ಲಿಸಿ ತಿಂಗಳುಗಳು ಕಳೆದರೂ ಕಾರ್ಮಿಕರಿಗೆ ಉದ್ಯೋಗ ನೀಡಲಾಗುತ್ತಿಲ್ಲ. ನಿಯಮಾನುಸಾರ 15 ದಿನಗಳೊಳಗೆ ಕೆಲಸ ನೀಡಬೇಕು, ಇಲ್ಲವಾದಲ್ಲಿ ನಿರುದ್ಯೋಗ ಭತ್ಯೆ ನೀಡಬೇಕು ಎಂಬ ನಿಯಮವನ್ನು ಪಾಲಿಸಲಾಗುತ್ತಿಲ್ಲ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ರೈತರಿಗೆ ಅನುಕೂಲವಾಗುವ ದನದ ಶೆಡ್ ನಿರ್ಮಾಣ, ಬದು ನಿರ್ಮಾಣ, ಗೋಕಟ್ಟೆ, ಕೃಷಿ ಹೊಂಡ, ನಾಲೆ ಹೂಳೆತ್ತುವುದು, ಗ್ರಾಮೀಣ ರಸ್ತೆ ಅಭಿವೃದ್ಧಿ ಸೇರಿದಂತೆ ವಿವಿಧ ಕಾಮಗಾರಿಗಳನ್ನು ಕಾಮಗಾರಿ ಗುಚ್ಛದಲ್ಲಿ ಸೇರಿಸಿ ತಕ್ಷಣ ಕಾರ್ಯಾರಂಭ ಮಾಡಬೇಕೆಂದು ಒತ್ತಾಯಿಸಿದರು.

ಇದಲ್ಲದೆ, ಬಹುತೇಕ ಗ್ರಾಮ ಪಂಚಾಯತಿಗಳಲ್ಲಿ ಶುದ್ಧ ಕುಡಿಯುವ ನೀರು, ರಸ್ತೆ, ಚರಂಡಿ, ಸಾರ್ವಜನಿಕ ಶೌಚಾಲಯ ಸೇರಿದಂತೆ ಮೂಲಭೂತ ಸೌಕರ್ಯಗಳ ಕೊರತೆ ಉಂಟಾಗಿದೆ ಎಂದು ದೂರಿದರು. ವಿವಿಧ ವಸತಿ ಯೋಜನೆಗಳಡಿ ಅರ್ಹ ಫಲಾನುಭವಿಗಳಿಗೆ ಮನೆ ಹಾಗೂ ನಿವೇಶನ ವಿತರಣೆ, ''ನಮ್ಮ ಹೊಲ ನಮ್ಮ ರಸ್ತೆ'' ಯೋಜನೆಯಡಿ ರೈತರ ಹೊಲಗಳಿಗೆ ರಸ್ತೆ ನಿರ್ಮಾಣ, ಸರ್ಕಾರಿ ಶಾಲೆಗಳಿಗೆ ಅಗತ್ಯ ಮೂಲಸೌಕರ್ಯ ಒದಗಿಸುವಂತೆ ಆಗ್ರಹಿಸಿದರು.

ಜಾಲಹಳ್ಳಿ ಗ್ರಾಮ ಪಂಚಾಯತಿಯಲ್ಲಿ ಕೆಲಸ ನಿರ್ವಹಿಸಿದ ಕೂಲಿಕಾರರಿಗೆ ಕಡಿಮೆ ಕೂಲಿಹಣ ನೀಡಿದ ಪ್ರಕರಣದ ಬಗ್ಗೆ ತನಿಖೆ ನಡೆಸಿ ಸಂಬಂಧಿತ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು. ಹಾಗೆಯೇ ಬಿ.ಗಣೇಕಲ್ ಪಂಚಾಯ್ತಿ ವ್ಯಾಪ್ತಿಯ ಪಂದ್ಯಾನ

4ನೇ ಪುಟಕ್ಕೆ...

ಫೆ, 28ರಂದು ವಿಚಾರ ಸಂಕಿರಣ : ಎಂ. ಗಂಗಾಧರ



ಸಿಂಧನೂರು,ಫೆ.27-

ಭಾರತದ ಸ್ವಾತಂತ್ರ್ಯ ಚಳುವಳಿಯಲ್ಲಿ ಕಮ್ಯುನಿಷ್ಟರ ಪಾತ್ರ, ಹಾಗೂ ಜಾತಿ ನಿರ್ಮೂಲನೆಗಾಗಿ ಮಾರ್ಕ್ಸ್ ವಾದಿ ಹಾಗೂ ಅಂಬೇಡ್ಕರ್ ವಾದಿಗಳ ಐಕ್ಯತೆಯ ಸವಾಲುಗಳು ಎಂಬ ಎರಡು ಮಹತ್ವದ ರಾಷ್ಟ್ರೀಯ ವಿಷಯಗಳ ಕುರಿತು ಫೆಬ್ರವರಿ 28ರಂದು ನಗರದ ಶಾದಿ ಮಹಲ್ ನಲ್ಲಿ ಸಿಪಿಐ (ಎಂಎಲ್)ರೆಡ್ ಸ್ಟಾರ್ ಕಮ್ಯುನಿಸ್ಟ್ ಪಕ್ಷದ ವತಿಯಿಂದ ವಿಚಾರ ಸಂಕಿರಣ ಕಾರ್ಯಕ್ರಮ ನಡೆಯಲಿದೆ ಎಂದು ಸಿಪಿಐ(ಎಂಎಲ್) ರೆಡ್ ಸ್ಟಾರ್ ಪಕ್ಷದ ರಾಜ್ಯ ಸಮಿತಿ ಸದಸ್ಯ ಎಂ. ಗಂಗಾಧರ ಹೇಳಿದರು

ಗುರುವಾರರಂದು ನಗರದ ಪತ್ರಿಕಾ ಭವನದಲ್ಲಿ ಕರೆದಿದ್ದ ಪತ್ರಿಕಾ ಗೋಷ್ಠಿಯಲ್ಲಿ ಅವರು ಮಾತನಾಡಿ ಭಾರತದ ಸ್ವಾತಂತ್ರ್ಯ ಚಳುವಳಿಯಲ್ಲಿ ರೈತರು ಕಾರ್ಮಿಕರು ಆದಿವಾಸಿಗಳನ್ನು ಸಂಘಟಿಸಿ ಬಹುದೊಡ್ಡ ಬಲಿದಾನ ಮಾಡಿದ ಕಮ್ಯುನಿಷ್ಟರ ಪಾತ್ರವನ್ನು ಇಂದು ಬಲಪಂಥೀಯ ಉಗ್ರವಾದಿ ಚಿಂತಕರು ಹಾಗೂ ಪ್ರಚಾರಕರು ಯೋಜನ ಬದ್ಧವಾಗಿ ಗೌಣಗೊಳಿಸುತ್ತಿದ್ದಾರೆ. ಅಲ್ಲದೆ ಸ್ವಾತಂತ್ರ್ಯ ಚಳುವಳಿಯಲ್ಲಿ ಕಮ್ಯುನಿಸ್ಟರು ಎಂತಹ ಸ್ವಾತಂತ್ರ್ಯಕ್ಕಾಗಿ ಹೋರಾಡಿದರು ಎಂಬ ಸತ್ಯಾಂಶವು ಹೊಸ ತಲೆಮಾರಿನ ಜನಗಳಿಗೆ ಅಪರಿಚಿತವಾಗಿದೆ. ಸ್ವಾತಂತ್ರ್ಯ ಚಳುವಳಿಯ ಅಶೋತ್ತರಗಳು ಇದುವರೆಗೂ ಈಡೇರದೆ ಹೋದ ವಾಸ್ತವನ್ನು ಮತ್ತೆ ಮತ್ತೆ ಚರ್ಚಿಸಬೇಕಾಗಿದೆ ಎಂದರು

ದುಡಿಯುವರ್ಗ ಹಾಗು ದಮನಿತ ಜನಗಳ ವಿಮುಕ್ತಿಗಾಗಿ ಅಪೂರ್ಣಗೊಂಡ ಸ್ವಾತಂತ್ರ್ಯ ಚಳುವಳಿಯನ್ನು ಇಂದು ಮುಂದುವರಿಸಬೇಕಾಗಿದ. ಹಾಗೆಯೆ,ಭಾರತ ಸಮಾಜದ ಸಮಗ್ರ ಬದಲಾವಣೆ ಚಳುವಳಿಯು ಜಾತಿ ನಿರ್ಮೂಲನೆಯಾಗದೆ ಅಸಾಧ್ಯ

4 ನೇ ಪುಟಕ್ಕೆ...




ಹಾಲು ಉತ್ಪಾದಕರ ಸಹಕಾರ ಸಂಘ ಅಧ್ಯಕ್ಷರಾಗಿ ಅಮರಪ್ಪ ಪೂಜಾರಿ ಆಯ್ಕೆ

ಲಿಂಗಸೂಗೂರು,ಫೆ.27-

ಲಿಂಗಸೂಗೂರ ಈಚನಾಳ ಗ್ರಾಮದಲ್ಲಿ ಇಂದು ನಡೆದ ಹಾಲು ಉತ್ಪಾದಕರ ಸಹಕಾರಿ ಸಂಘದ ಅಧ್ಯಕ್ಷರಾಗಿ ಶ್ರೀ ಅಮರಪ್ಪ ತಂದೆ ಗೆದ್ದಪ್ಪ ಪೂಜಾರಿ ಆಯ್ಕೆಯಾಗಿದ್ದಾರೆ ಹಾಗೂ ಉಪಾಧ್ಯಕ್ಷರಾಗಿ ಹನುಮಂತ ತಂದೆ ಗದ್ಯಪ್ಪ ಹಳ್ಳಿ ಹಳ್ಳಿಯವರು ಆಯ್ಕೆಯಾಗಿದ್ದು ಸಭಾಧ್ಯಕ್ಷರು ತಿಳಿಸಿದ್ದಾರೆ ವಿಜಯ್ ಕುಮಾರ್ ಮೇಟಿ

ಈ ಸಂದರ್ಭದಲ್ಲಿ ಮಾಜಿ ಅಧ್ಯಕ್ಷರು ಪೀರಸಾಬ್ ಪಂಚ್ಮಿ, ಅಮರೇಶ್ ಜಿ ಮೆಟ್ಟಿ , ದೇವರೆಡ್ಡಿ ಮೇಟಿ, ಮುದುಕಪ್ಪ ಕುಂಬ್ಳಾರ್ ದೊಡ್ಡಪ್ಪ ಚಿಗರಿ,ಗದ್ಯಪ್ಪ ಪೂಜಾರಿ, ಉಜ್ಜಪ್ಪ ಪೂಜಾರಿ, ಖಾಜಣ್ಣ,ದೇವಪ್ಪ ಕುಬಾರ, ಮಲ್ಲಪ್ಪ ಗುಜಲ್, ಯಕ್ಕಪ್ಪ ಕಟ್ಟಿಮನಿ, ಇಮಾಮ್ ಸಾಬ್, ಇನ್ನಿತರರು ಇದ್ದರು.



ಸುರಪುರ ಆರ್ ಕೆ ಎನ್ ಕ್ರಿಕೆಟ್ ಟೂರ್ನಮೆಂಟ್. ಕ್ವಾಟರ್ ಫೈನಲ್ ಪಂದ್ಯಾವಳಿ. ಚುರುಕಿನಿಂದ ಸೇಣ ಸಾಡಲಿವೆ. ಪಂದ್ಯಕ್ಕೆ ಚಾಲನೆ ನೀಡಿದ ಯುತ್ ಅಧ್ಯಕ್ಷ ರಾಜಾ ಕುಮಾರ್ ನಾಯಕ್. ರಾಜ ವಿಜಯ್ ಕುಮಾರ್ ನಾಯಕ್. ರಾಜಹರುಷವರ್ಧನ್ ನಾಯಕ್. ಭೀಮನಗೌಡ ಯಮನೂರ್. ವೆಂಕಟೇಶ್ ಬೇಟೆಗಾರ. ರವಿ ಸೌಕಾರ್. ಬೀಮು ನಾಯಕ್ ಅನೇಕ ಮುಖಂಡರು ಜೊತೆಗಿದ್ದರು ಈ ಟೂರ್ನಮೆಂಟ್ ಆಡಲು ರಾಜ್ಯ ಅಂತ ರಾಜ್ಯದಿಂದ. ಒಳ್ಳೆಯ ಕ್ರೀಡಾಪಟುಗಳು ಆಗಮಿಸಿದರು ಕ್ರಿಕೆಟ್ ಪಂದ್ಯಾವಳಿಯನ್ನು ವೀಕ್ಷಣೆ ಮಾಡಲು ಸಾವಿರಾರು ಜನ ಪ್ರೇಕ್ಷಕರು ಕ್ರೀಡಾಂಗಣದಲ್ಲಿ ತುಂಬಿ ತುಳುಕಿದರು.????

ಆರ್‌ಆರ್‌ಸಿ ಮೊತ್ತವನ್ನು ಸಂಪೂರ್ಣವಾಗಿ ಪಾವತಿಸಲು ಸಲಹೆ

ಯಾದಗಿರಿ ,ಫೆ.26-

ಉದ್ಯೋಗಿಗಳ ಭವಿಷ್ಯ ನಿಧಿ ಮತ್ತು ಇತರೆ ನಿಯಮಾವಳಿ ಕಾಯ್ದೆ 1952 (ಇಪಿಎಫ್, ಎಮ್‌ಪಿ ಆಕ್ಟ್ 1952) ಸೆಕ್ಷನ್ 8 ಅಡಿಯಲ್ಲಿ ಜಾರಿ ಮಾಡಲಾದ ವಸೂಲಿ ಪ್ರಮಾಣ ಪತ್ರಗಳು (ಆರ್‌ಆರ್‌ಸಿಎಸ್) ವಿರುದ್ಧವಾಗಿ ಹೊರಡಿಸಲಾದ ಎಲ್ಲಾ ಸಂಸ್ಥೆಗಳು, ಉದ್ಯೋಗದಾತರಿಗೆ ಗಮನಕ್ಕೆ ನೀಡಲಾಗಿದೆ ಎಂದು ರಾಯಚೂರು ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತರು ಪ್ರಾದೇಶಿಕ ಮತ್ತು ವಸೂಲಿ ಅಧಿಕಾರಿ ನೀರಜ್‌ಕುಮಾರ ಅವರು ತಿಳಿಸಿದ್ದಾರೆ.

ಆ ಪ್ರಮಾಣಪತ್ರಗಳಲ್ಲಿ ನಿರ್ದಿಷ್ಟಪಡಿಸಿದ ಬಾಕಿ ಮೊತ್ತವನ್ನು ಇಪಿಎಫ್‌ಎಮ್‌ಪಿ ಆಕ್ಟ್ 1952ರ ಸೆಕ್ಷನ್ 8 ಹಾಗೂ ವಸೂಲಿ ಪ್ರಕ್ರಿಯೆಗಳಿಗೆ ಅನುಗುಣವಾಗಿ ಅಳವಡಿಸಲಾದ ದ್ವಿತೀಯ ಮತ್ತು ತೃತೀಯ ಅನುಸೂಚಿಗಳ ಅನ್ವಯ ವಸೂಲಿ ಮಾಡಲಾಗುತ್ತದೆ. ಈ ಪ್ರಕಟಣೆ, ಯಾವುದೇ ನ್ಯಾಯಾಲಯ, ನ್ಯಾಯ ಮಂಡಳಿ ವಸೂಲಿ ಪ್ರಕ್ರಿಯೆಗಳನ್ನು ತಾತ್ಕಾಲಿಕವಾಗಿ ನಿಲ್ಲಿಸಿದ ಮತ್ತು ಆ ತಾತ್ಕಾಲಿಕ ನಿಲುಗಡೆ ಪ್ರಸ್ತುತ ಜಾರಿಯಲ್ಲಿರುವ ಪ್ರಕರಣಗಳಿಗೆ ಅನ್ವಯಿಸುವುದಿಲ್ಲ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಂತಃಕರಣದ ತಾಯಿ ಗುಣ ನೆಲದ ಜಾನಪದಕ್ಕಿದೆ



ಬಳ್ಳಾರಿ ಫೆ ,26-

ಉಣಬಡಿಸುವ,ಹಾರೈಸುವ, ಅಂತಃಕರಣವನ್ನು ಮೊಗೆದು ಕೊಡುವ ಗುಣ ತಾಯಿಯದ್ದು. ನೆಲವೆಂದರೆ ತಾಯಿ.ಆ ತಾಯಿಯೇ ಜಾನಪದ ಎಂದು ಕೋಲಾರದ ಹಿರಿಯ ಸಾಹಿತಿ ಸ.ರಘುನಾಥ ಅಭಿಪ್ರಾಯಪಟ್ಟರು

ನಗರದ ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರಕಾರಿ ಪ್ರಥಮ ದರ್ಜೆ (ಸ್ವಾಯತ್ತ) ಕಾಲೇಜಿನ ಸಭಾಂಗಣದಲ್ಲಿ ಕನ್ನಡ ವಿಭಾಗದಿಂದ ಆಯೋಜಿಸಿದ್ದ ಜಾನಪದದ ಮೂಲಕ ಆಧುನಿಕ ವ್ಯಕ್ತಿತ್ವ ವಿಕಸನ ಸಾಧ್ಯವೇ? ಎನ್ನುವ ವಿಷಯದ ಕುರಿತು ವಿಶೇಷ ಉಪ ನ್ಯಾಸ ನೀಡಿ ಮಾತನಾಡಿದರು.

ಬೆಳೆದ ಪೈರು ತಲೆದೂಗುವ, ತಲೆಯೆತ್ತಿ ನಿಲ್ಲುವ, ಬಾಗಿ ನಮಿಸುವ ಗುಣ ಸ್ವಾಭಿಮಾನ ಮತ್ತು ವಿನಯ ವನ್ನು ದರ್ಶಿಸುತ್ತದೆ. ಅಸಹಾಯ ಕರಿಗೆ ಭರವಸೆ, ನೋವುಂಡವರಿಗೆ ನಗೆ, ನೊಂದವರ ಕಣ್ಣೀರು ಒರೆಸುವ ಸಾಂತ್ವನ ಇದೆಲ್ಲವೂ ಜಾನಪದ ಸಂಸ್ಕೃತಿಯಲ್ಲಿ ಜೀವಂತವಾಗಿದೆ ಎಂದು ವಿಶ್ಲೇಷಿಸಿದರು.

ಜಾನಪದ ಸಾಹಿತ್ಯ ಅಪರೂಪದ ಮೌಲ್ಯಗಳನ್ನು ದಾಟಿಸುವುದ ರೊಂದಿಗೆ ನಮ್ಮ ವ್ಯಕ್ತಿತ್ವವನ್ನು ವಿಕಸನಗೊಳಿಸುವಲ್ಲಿ ಪ್ರಮುಖವಾದ ಪಾತ್ರವನ್ನು ವಹಿಸುತ್ತದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕನ್ನಡ ವಿಭಾಗದ ಮುಖ್ಯಸ್ಥ ದಸ್ತಗೀ ರಸಾಬ್ ದಿನ್ನಿ ಜಾನಪದ ಸಾಹಿತ್ಯಕ್ಕೆ ಮನಸ್ಸನ್ನು ತೀವ್ರವಾಗಿ ಮೀಟುವ, ಸಂವೇದನೆಯನ್ನು ಜಾಗೃತ ಗೊಳಿ ಸುವ, ಸುತ್ತಲಿನ ಜನರೊಂದಿಗೆ ಪ್ರೀತಿ, ಸ್ನೇಹ ಸಂಬಂಧದ ಪರಿಮಿತದಲ್ಲಿ ಬದುಕುವ, ಹೊಸ ಅನುಭೂತಿಯನ್ನು ನೀಡುವ ಶಕ್ತಿ ಇದೆ ಎಂದರು.


ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಪ್ರಾಂಶು ಪಾಲರಾದ ಡಾ. ಜಿ.ಪ್ರಹ್ಲಾದ ಚೌದ್ರಿ, ಆಧುನಿಕ ಜೀವನದ ಒತ್ತಡದಲ್ಲಿ ನಮ್ಮನ್ನು ಮನುಷ್ಯ ರನ್ನಾಗಿಸುವ. ಮಾನವೀಯತೆಯ ಕಡೆ ಕರೆದುಕೊಂಡು ಹೋಗುವ ಜಾನಪದ ಸಾಹಿತ್ಯವನ್ನು ಉಳಿಸುವ, ಬೆಳೆಸುವ ಕೆಲಸ ನಮ್ಮೆಲ್ಲರದಾಗಿದೆ ಎಂದರು.

ವೇದಿಕೆಯ ಮೇಲೆ ರೈತ ಸಂಘದ ಮುಖಂಡ ಮಲ್ಲಿಕಾರ್ಜುನ್ ರೆಡ್ಡಿ ಚಾಗನೂರು, ಸಹಾಯಕ ಪ್ರಾಧ್ಯಾಪಕ ರಾಮಸ್ವಾಮಿ ಇದ್ದರು.

ಈ ಸಂದರ್ಭದಲ್ಲಿ ಲೇಖಕರಾದ ವೀರೇಂದ್ರ ರಾವಿಹಾಳ, ಚಿಂತಕರಾದ ದಾದಾ ಕಲಂದರ್ ರಂಗಕರ್ಮಿ ಅಬ್ದುಲ್ಲಾ, ಡಾ. ಸಿದ್ದೇಶ್ವರಿ, ಪ್ರಾಧ್ಯಾಪಕರಾದ ಡಾ. ಹುಚ್ಚೂಸಾಬ್, ಪ್ರವೀಣ್ ಕುಮಾರ್‌ನಾಥ್, ಮಹಾಂತೇಶ್, ಹನಮೇಶ್ ಉಪಸ್ಥಿತರಿದ್ದರು.

ಬಳ್ಳಾರಿ : ಸಿರುಗುಪ್ಪ ಮಾರ್ಗ ಸಿಂಧನೂರು ಸಂಪರ್ಕ ಮಾರ್ಗ ನಿರ್ಮಿಸಲು ರೈಲ್ವೆ ಯೋಜನೆ ನನೆಗುದಿಗೆ ಅನುಷ್ಠಾನಕ್ಕೆ ಒತ್ತಾಯ

ಸಿರುಗುಪ್ಪ- ಬಳ್ಳಾರಿಯಿಂದ ಸಿರುಗುಪ್ಪ ಸಿಂಧನೂರು ಮಸ್ಕಿ ಲಿಂಗಸೂಗೂರ್ ಮಾರ್ಗದ ರೈಲ್ವೆ ಬ್ರಾಡ್ ಗೇಜ್ ನಿರ್ಮಾಣದ ಯೋಜನೆ ಕಳೆದ ಒಂದು ದಶಕದ ಹಿಂದೆಯೇ ಭಾರತ ಸರ್ಕಾರದಿಂದ ಬಜೆಟ್ ನಲ್ಲಿ ಘೋಷಣೆ ಯಾಗಿದ್ದು ಸರ್ವೆಗೆ ಮಾತ್ರ ಸೀಮಿತಗೊಂಡಿದೆ ಎಂದು ಕರ್ನಾಟಕ ರಾಜ್ಯ ವಯಸ್ಕರ ಶಿಕ್ಷಣ ಸೆಂಟ್ರಲ್ ಕೌನ್ಸಿಲ್ ರಾಷ್ಟ್ರೀಯ ಸಾಕ್ಷರತಾ ಸದಸ್ಯರು ಸಾಮಾಜಿಕ ಕಾರ್ಯಕರ್ತ ಅಬ್ದುಲ್ ನಬಿ ಅವರು ಹೇಳಿದರು.



ಬಳ್ಳಾರಿ ಲಿಂಗಸೂಗೂರು ಮಾರ್ಗದ ರೈಲು ಹೊಸ ದಿಲ್ಲಿಗೆ ಎರಡನೇ ಬಾರಿ ನಿಯೋಗ ಅಕ್ಕಿ ಗಿರಣಿಗಳಿಗೆ ಉತ್ತೇಜನಕ್ಕೆ ಸಹಕಾರಿ ಈಗಗಾಲೇ ಸಿಂಧನೂರು ತಾಲೂಕಿಗೆ ರೈಲು ಮಾರ್ಗ ಬಂದಿದೆ ಇಂದಿಗೂ ಸರ್ವೆಗೆ ಸೀಮಿತವಾಗಿ ಸಿರುಗುಪ್ಪ ತಾಲೂಕ ದಿಂದ ಬಳ್ಳಾರಿಗೆ ಸಂಪರ್ಕ ಮಾರ್ಗ ಇಂದಿಗೂ ನಿರ್ಮಾಣವಾಗಿಲ್ಲ ಈ ಹಿನ್ನೆಲೆಯಲ್ಲಿ ಸಿರುಗುಪ್ಪ ತಾಲೂಕಿನ ಪ್ರಗತಿ ಪರರು ಹಾಗೂ ರೈಲ್ವೆ ಕ್ರಿಯ ಸಮಿತಿಯಿಂದ ಹೋರಾಟ ತೀವ್ರಗೊಂಡಿದ್ದು ಎರಡನೇ ಬಾರಿಗೆ ದೆಹಲಿಗೆ ನಿಯೋಗ ತೆರಳುವ ಮೂಲಕ ರೈಲ್ವೆ ಮಾರ್ಗಕ್ಕೆ ಒತ್ತಾಯಿಸುವ ಹೋರಾಟಕ್ಕೆ ಮುಂದಾಗಿದೆ ಕರ್ನಾಟಕ ರಾಜ್ಯದವರೇ ರೈಲ್ವೆ ಸಚಿವರು ಈ ಯೋಜನೆಯು ಬಳ್ಳಾರಿ ರಾಯಚೂರು ಹಾಗೂ ಕೊಪ್ಪಳ ಜಿಲ್ಲೆಗಳಿಗೆ ವಿಸ್ತರಣೆ ಯಾಗಲಿದೆ.

ಕೊಪ್ಪಳ ಸಂಸದ ಕರಡಿ ಸಂಗಣ್ಣ ಅವರು ಒಂದೆರಡು ಬಾರಿ ಈ ವಿಷಯ ಪ್ರಸ್ತಾಪಿಸಿದ್ದು ಬಿಟ್ಟರೆ ಬೇರೆ ಯಾವ ಸಂಸದರು ಮಾತನಾಡಿಲ್ಲ ಸದ್ಯ ವಿ ಸೋಮಣ್ಣ ಅವರು ಕೇಂದ್ರದಲ್ಲಿ ರಾಜ್ಯ ರೈಲ್ವೆ ಸಚಿವರಾಗಿದ್ದಾರೆ 3 ಜಿಲ್ಲೆಗಳಲ್ಲಿ ಕಾಂಗ್ರೆಸ್ ಸಂಸದರೇ ಇರುವುದರಿಂದ ಕಾಮಗಾರಿ ಆರಂಭಕ್ಕೆ ಮೀನಮೇಷ ಮಾಡಲಾಗುತ್ತಿದೆ ಎನ್ನುವ ಅನುಮಾನ ಮೂಡಿದೆ ಜನರ ಹಿತಕ್ಕಾಗಿ ಒತ್ತು ನೀಡಲು ಸ್ಥಳೀಯ ರಾಜಕೀಯ ನಾಯಕರು ಸಹ ಒಮ್ಮತದಿಂದ ರೈಲ್ವೆ ಸಂಪರ್ಕದ ಕಾರ್ಯಕ್ಕೆ ಮುಂದಾಗ ಬೇಕಿದೆ ಎನ್ನುವ ಅಭಿಪ್ರಾಯ ವ್ಯಕ್ತವಾಗಿದೆ ಒಟ್ಟಾರೆ ಬಳ್ಳಾರಿಯಿಂದ ಲಿಂಗಸುಗೂರು ವರೆಗೆ ರಸ್ತೆಯ ಮೂಲಕ 150 ಕಿಲೋ ಮೀಟರ್ ವ್ಯಾಪ್ತಿಯಿದ್ದು ಈ ಯೋಜನೆಗೆ ಅಗತ್ಯ ಅನುದಾನ ನೀಡಬೇಕಿದೆ ಸಿರುಗುಪ್ಪ ತಾಲೂಕು ಅತಿ ಹೆಚ್ಚು ಅಕ್ಕಿ ಗಿರಣಿಗಳನ್ನು ಹೊಂದಿದೆ ಭತ್ತ ಅಕ್ಕಿ ರಫ್ತು ಆಮದು ಮಾಡಲು ರೈಲ್ವೆ ಮಾರ್ಗದಿಂದ ಹೆಚ್ಚು ಆದಾಯ ಈ ಭಾಗದಲ್ಲಿ ಉದ್ಯೋಗ ಸೃಷ್ಟಿಯಾಗಿ ರೈಲ್ವೆ ಇಲಾಖೆಗೂ ಆದಾಯ ಹೆಚ್ಚಲಿದೆ ಈಗಾಗಲೇ ತುಮಕೂರು ರಾಯದುರ್ಗ ಬಳ್ಳಾರಿ ಮಾರ್ಗದ ಬ್ರಾಡ್ ಗೇಜ್ ಅಂತಿಮವಾಗಿದ್ದು ಈ ಮಾರ್ಗದಲ್ಲಿ ರೈಲು ಸಂಚಾರ ಆರಂಭವಾದರೆ ಬೆಂಗಳೂರು ತುಮಕೂರು ಮಾರ್ಗದಿಂದ ಬಳ್ಳಾರಿ ಸಿರುಗುಪ್ಪ ಸಿಂಧನೂರು ಮೂಲಕ ನೇರವಾಗಿ ಕಲಬುರಗಿ ಸಂಪರ್ಕ ಆಗಲಿದೆ ಎಂದು ಸಿರುಗುಪ್ಪ ಅಕ್ಕಿ ಗಿರಣಿ ಮಾಲೀಕರ ಸಂಘದ ಅಧ್ಯಕ್ಷರಾದ ಎನ್ ಜಿ ಬಸವರಾಜಪ್ಪ ಅವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ ಕಳೆದ ಒಂದು ದಶಕದಿಂದ ನನೆಗುದಿಗೆ ಬಿದ್ದಿರುವ ರೈಲ್ವೆ ಯೋಜನೆ ಆರಂಭಿಸುವಂತೆ ರಾಜ್ಯ ರೈಲ್ವೆ ಸಚಿವ ವಿ ಸೋಮಣ್ಣ ಅವರಿಗೆ ಮನವಿ ಸಲ್ಲಿಸಲಾಗಿದೆ ಜತೆಗೆ ಮುಂದಿನ ಮಾರ್ಚ್ ನಲ್ಲಿ ಸಿರುಗುಪ್ಪ ತಾಲೂಕಿನ ಪ್ರಮುಖರನ್ನು ಒಳಗೊಂಡ ನಿಯೋಗ ದೆಹಲಿಗೆ ಭೇಟಿ ನೀಡಿ ರೈಲ್ವೆ ಇಲಾಖೆಗೆ ಸಂಬಂಧಿಸಿದ ಅಧಿಕಾರಿಗಳನ್ನು ಹಾಗೂ ಸಚಿವರನ್ನು ಖುದ್ದು ಭೇಟಿಯಾಗಿ ರೈಲ್ವೆ ಮಾರ್ಗ ಅನುಷ್ಠಾನಕ್ಕೆ ಒತ್ತಾಯಿಸಲಾಗುವುದು ಎಂದು ರೈಲ್ವೆ ಕ್ರಿಯಾ ಸಮಿತಿಯ ರಾಜ್ಯ ಅಧ್ಯಕ್ಷರಾದ ಕೆ ಎಮ್ ಮಹೇಶ್ವರ ಸ್ವಾಮಿ ಬಳ್ಳಾರಿ ಸಿರುಗುಪ್ಪ ದಿಂದ ಸಿಂಧನೂರು ಮಾರ್ಗ ನೆನೆಗುದಿಗೆ ಬಿದ್ದ ರೈಲ್ವೆ ಯೋಜನೆ ನಿರ್ಮಿಸಲು ಆಗ್ರಹಿಸಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಯುವನಿಧಿ ಪ್ಲಸ್ ಅಡಿ ಅರಿವು ಕಾರ್ಯಾಗಾರ



ಕೊಪ್ಪಳ ಫೆ.27-

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಕೊಪ್ಪಳ ಇವರುಗಳ ಸಂಯುಕ್ತಾಶ್ರಯದಲ್ಲಿ ಯುವನಿಧಿ ಯೋಜನೆಯಡಿಯಲ್ಲಿ ನಿರುದ್ಯೋಗ ಭತ್ಯೆ ಪಡೆಯುತ್ತಿರುವ ಪದವಿ ಹಾಗೂ ಡಿಪ್ಲೊಮಾ ಅಭ್ಯರ್ಥಿಗಳಿಗೆ ಯುವನಿಧಿ ಪ್ಲಸ್ ಅಡಿಯಲ್ಲಿ ಉಚಿತವಾಗಿ ಕೌಶಲ್ಯ ತರಬೇತಿ ನೀಡಲು ಗುರುವಾರದಂದು ಕೊಪ್ಪಳದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಒಂದು ದಿನದ ಅರಿವು ಮೂಡಿಸುವ ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಮಂಜುನಾಥ ಗೊಂಡಬಾಳ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಗವಿಶಂಕರ್ ಕೆ., ಜಿಲ್ಲಾ ಉದ್ಯೋಗಾಧಿಕಾರಿ ಮಂಜುಳಾ, ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲರಾದ ವೈ.ಬಿ ಅಂಗಡಿ, ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿ.ಟಿ.ಟಿ.ಸಿ) ಪ್ರಾಂಶುಪಾಲರಾದ ಮೌನೇಶ ರಾಠೋಡ್, ಸಹಾಯಕ ನಿರ್ದೇಶಕ ಮಂಜುನಾಥ ಬೆಲ್ಲದ್, ಸಿಡಾಕ್ ತರಬೇತಿ ಅಧಿಕಾರಿ ಶೋಭಾ, ಕುಕನೂರಿನ ಸರ್ಕಾರಿ ಕೈಗಾರಿಕಾ ಕೇಂದ್ರದ ಪ್ರಭಾರಿ ಪ್ರಾಂಶುಪಾಲರಾದ ಮಂಜಪ್ಪ, ಸರ್ಕಾರಿ ಕೈಗಾರಿಕಾ ಕೇಂದ್ರ, ತಳಕಲ್‌ನ ಪ್ರಭಾರಿ ಪ್ರಾಂಶುಪಾಲರಾದ ಮಹ್ಮದ ರಫಿ, ತಾಲೂಕು ಮಟ್ಟದ ಅಧಿಕಾರಿಗಳು, ಸಿಬ್ಬಂದಿಯವರು ಮತ್ತು 250ಕ್ಕೂ ಹೆಚ್ಚು ಅಭ್ಯರ್ಥಿಗಳು, ಯುವನಿಧಿ ಫಲಾನುಭವಿಗಳು ತರಬೇತಿ ಕಾರ್ಯಾಗಾರದಲ್ಲಿ ಹಾಜರಿದ್ದು ಮಾಹಿತಿ ಪಡೆದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಮಾ.14 ರಂದು ರಾಷ್ಟ್ರೀಯ ಲೋಕ್ ಅದಾಲತ್

ಬಳ್ಳಾರಿ,ಫೆ.26-

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ನಿರ್ದೇಶನದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಮಾರ್ಚ್ 14 ರಂದು ನಗರದ ತಾಳೂರು ರಸ್ತೆಯ ಹೊಸ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ನಡೆಸಲಾಗುವುದು.

ಸಾರ್ವಜನಿಕರು ತಮ್ಮ ವ್ಯಾಜ್ಯ ಪೂರ್ವ, ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು, ಚೆಕ್ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ಪ್ರಕರಣಗಳು, ಸಿವಿಲ್ ಪ್ರಕರಣಗಳು ಹಾಗೂ ಇತರೆ ರಾಜಿಯಾಗಬಹುದಾದ ಪ್ರಕರಣಗಳನ್ನು ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಒಟ್ಟು 31 ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ಶೀಘ್ರವೇ ಇತ್ಯರ್ಥಗೊಳಿಸಿ ಪರಿಹಾರ ಪಡೆದುಕೊಳ್ಳಲು ಸುವರ್ಣ ಅವಕಾಶವಾಗಿದೆ. ಸಾರ್ವಜನಿಕರು, ಕಕ್ಷಿದಾರರು ಇದರ



ಪ್ರಯೋಜನ ಪಡೆದುಕೊಳ್ಳುವುದರ ಮೂಲಕ ತಮ್ಮ ವಿವಾದಗಳನ್ನು ಅಂತ್ಯಗೊಳಿ ಸಿಕೊಳ್ಳಬಹುದು.

ರಾಷ್ಟ್ರೀಯ ಲೋಕ್ ಅದಾಲತ್ ಅಂಗವಾಗಿ ಪ್ರತಿದಿನ ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಯ 31 ನ್ಯಾಯಾಲಯಗಳಲ್ಲಿ ಪೂರ್ವಭಾವಿ ಬೈಠಕ್ ಗಳು ನಡೆಯುತ್ತಲಿರುತ್ತವೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ದೂ.08392-278077 ಹಾಗೂ ಎನ್‌ಎಎಲ್‌ಎಸ್‌ಎ ಸಹಾಯವಾಣಿ ಸಂಖ್ಯೆ 15100 ಗೆ ಕರೆ ಮಾಡಿ ಮಾಹಿತಿ ಪಡೆಯಬಹುದು.

ಸಾರ್ವಜನಿಕರು ಹಾಗೂ ಕಕ್ಷಿದಾರರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಕೆ.ಜಿ.ಶಾಂತಿ ಅವರು ತಿಳಿಸಿದ್ದಾರೆ.

ಸಿರುಗುಪ್ಪ : ಸಾರ್ವಜನಿಕರ ಸಕಾಲಕ್ಕೆ ಸೇವೆ ಒದಗಿಸಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್



ಸಿರುಗುಪ್ಪ - ನಗರದ ಮಿನಿ ವಿಧಾನಸೌಧದಲ್ಲಿರುವ ವಿವಿಧ ಸರ್ಕಾರಿ ಕಚೇರಿ ಸುತ್ತಾಡಿದ ಬಳ್ಳಾರಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಅವರು ಕಚೇರಿಗೆ ವಿವಿಧ ಕೆಲಸ ಕಾರ್ಯಗಳಿಗಾಗಿ ಬಂದ ಸಾರ್ವಜನಿಕರ ಆಹ್ವಾಲುಗಳನ್ನು ಸ್ವೀಕರಿಸಿದರು ತಾಲೂಕು ಕಚೇರಿ ಪ್ರಾಂಗಣದಲ್ಲಿರುವ ಭೂಮಿ ಕೇಂದ್ರ, ನಾಡಕಚೇರಿ ಪಡಿತರ ಇಲಾಖೆ ಕಚೇರಿ ಭೂ ಸರ್ವೇಕ್ಷಣ ಇಲಾಖೆ ಭೂ ದಾಖಲೆಗಳ ಇಲಾಖೆ ವಿವಿಧ ಸಿಬ್ಬಂದಿ ಕಾರ್ಯ ನಿರ್ವಹಿಸುವ ಕಚೇರಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಂದ ಮಾಹಿತಿ ಪಡೆದರು ವಿವಿಧ ಕೆಲಸ ಕಾರ್ಯಗಳಿಗೆ ಬರುವ ಸಾರ್ವಜನಿಕರಿಗೆ ಸಕಾಲಕ್ಕೆ ಸೇವೆಗಳನ್ನು ಒದಗಿಸಬೇಕೆಂದು ಸೂಚನೆ ನೀಡಿದರು ಭೂ ಸರ್ವೇಕ್ಷಣ ಇಲಾಖೆಯಲ್ಲಿ ಖಾಲಿ ಇರುವ ರಟ್ಟಿನ ಡಬ್ಬೆಗಳನ್ನು ಹೊರಗೆ ತೆಗೆದು ಹಾಕಿ ಕಚೇರಿಯನ್ನು ಸ್ವಚ್ಛವಾಗಿ ಇಟ್ಟುಕೊಳ್ಳಬೇಕು ಎಂದು ಹೇಳಿದರು ಜನನ ಮರಣ ದಾಖಲೆ ಇಲಾಖೆಯಲ್ಲಿ ಕೇವಲ ಒಬ್ಬ ಸಿಬ್ಬಂದಿ ಇದ್ದು ಸಾರ್ವಜನಿಕರಿಗೆ ಸಮರ್ಪಕವಾಗಿ ಸೇವೆ ಸಿಗುತ್ತಿಲ್ಲ ಅದರಿಂದ ಜನನ ಮರಣ ದಾಖಲೆ ಇಲಾಖೆಯಲ್ಲಿ ಅಗತ್ಯ ಸಿಬ್ಬಂದಿಯನ್ನು ನೇಮಿಸಬೇಕು ಎಂದು ಹಿರಿಯ ವಕೀಲ ಅಬ್ದುಲ್ ಸಾಹೇಬ್ ಜಿಲ್ಲಾಧಿಕಾರಿಗಳನ್ನು ಆಗ್ರಹಿಸಿದರು ಪಡಿತರ ದೂರುದಾರರನ್ನು ಪಡಿತರ ಇಲಾಖೆಗೆ ಕರೆದೊಯ್ದು ಜಿಲ್ಲಾಧಿಕಾರಿಗಳು ಈ ವ್ಯಕ್ತಿಯ ಬಿಪಿಎಲ್ ಕಾರ್ಡ್ ಬಗ್ಗೆ ಸೂಕ್ತ ಮಾಹಿತಿ ನೀಡಬೇಕು ಅರ್ಹರಿದ್ದರೆ ತಕ್ಷಣವೇ ಬಿಪಿಎಲ್ ಕಾರ್ಡ್ ಕೊಡಿ ಎಂದು ಪಡಿತರ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು ವಿವಿಧ ಕೆಲಸ ಕಾರ್ಯಗಳಿಗೆ ಬರುವ ಸಾರ್ವಜನಿಕರಿಗೆ ತಾಲೂಕು ಕಚೇರಿ ಅವರಣದಲ್ಲಿ ಕುಳಿತುಕೊಳ್ಳಲು ಆಸನಗಳ ವ್ಯವಸ್ಥೆ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಎಂದು ಎಲ್ಲಾ ಇಲಾಖೆಯ ಅಧಿಕಾರಿಗಳು ತಮ್ಮ ಕಚೇರಿಯನ್ನು ಸ್ವಚ್ಛವಾಗಿಟ್ಟುಕೊಳ್ಳುವಂತೆ ನೋಡಿಕೊಳ್ಳಬೇಕು ಎಂದು ತಹಶೀಲ್ದಾರ್ ಗೌಸಿಯಾ ಬೇಗಂ ಅವರಿಗೆ ಸೂಚನೆ ನೀಡಿದರು ಸಾಮಾಜಿಕ ಕಾರ್ಯಕರ್ತ ಅಬ್ದುಲ್ ನಬಿ ಮತ್ತಿತರರು ಇದ್ದರು.

ಮಾ.3 ರಿಂದ ಜಿಲ್ಲೆಯಲ್ಲಿ ಮಾನಸಿಕ ಆರೋಗ್ಯ ಶಿಬಿರ

ಕಲಬುರಗಿ,ಫೆ.26- ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಹಾಗೂ ಮನೋ ಚೈತನ್ಯ ಕಾರ್ಯಕ್ರಮದಡಿ ಕಲಬುರಗಿ ಜಿಲ್ಲೆಯ ವಿವಿಧ ತಾಲೂಕಾ ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ, ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ 2026ರ ಮಾರ್ಚ್ ಮಾಹೆಯಲ್ಲಿ ಕೆಳಕಂಡ ದಿನಾಂಕ ಗಳಂದು ಮಾನಸಿಕ ಆರೋಗ್ಯ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿ ಗಳು ತಿಳಿಸಿದ್ದಾರೆ. ತಪಾಸಣಾ ಶಿಬಿರದ ವಿವರ ಇಂತಿದೆ. ಮಾರ್ಚ್ 3 ರಂದು ಆಳಂದ ತಾಲೂಕು ಸಾರ್ವಜನಿಕ ಆಸ್ಪತ್ರೆ, ಮಾರ್ಚ್ 6 ರಂದು ಕಮಲಾಪುರ ಪ್ರಾಥಮಿಕ ಆರೋಗ್ಯ ಕೇಂದ್ರ, ಮಾರ್ಚ್ 7 ರಂದು ಕಲಬುರಗಿ ಕೇಂದ್ರ ಕಾರಾಗೃಹ, ಮಾರ್ಚ್ 10 ರಂದು ಚಿಂಚೋಳಿ ತಾಲೂಕು ಸಾರ್ವಜನಿಕ ಆಸ್ಪತ್ರೆ, ಮಾರ್ಚ್ 13 ರಂದು ಅಫಜಲ ಪುರ ತಾಲೂಕು ಸಾರ್ವಜ ನಿಕ ಆಸ್ಪತ್ರೆ, ಮಾರ್ಚ್ 14 ರಂದು ಕಲಬುರಗಿ ಕೇಂದ್ರ ಕಾರಾಗೃಹ,

ಮಾರ್ಚ್ 17 ರಂದು ಚಿತ್ತಾಪುರ ಸಾರ್ವಜನಿಕ ತಾಲೂಕು ಆಸ್ಪತ್ರೆ, ಮಾರ್ಚ್ 18 ರಂದು ದೇವಲಗಾಣಗಾಪುರ ಸಂಗಮ್, ಮಾರ್ಚ್ 24 ರಂದು ಸೇಡಂ ತಾಲೂಕು ಸಾರ್ವಜನಿಕ ಆಸ್ಪತ್ರೆ, ಮಾನಸಿಕ ಕಾಯಿಲೆಗಳ ಲಕ್ಷಣಗಳ 'ನ್ನು ಹೊಂದಿರುವ ವ್ಯಕ್ತಿಗಳನ್ನು ಸಮುದಾಯದಲ್ಲಿ ಗುರುತಿಸಿ ಅವರನ್ನು ಈ ಶಿಬಿರ ನಡೆಯುವ ದಿನಾಂಕದಂದು ಕರೆತಂದು ತಜ್ಞರಿಗೆ ತೋರಿಸಿ ಚಿಕಿತ್ಸೆ ಕೊಡಿಸಬೇಕು ಅವರು ತಿಳಿಸಿದ್ದಾರೆ.

ಫೆ.28ರಿಂದ ಮಾ.17ರವರೆಗೆ ದ್ವಿತೀಯ ಪಿಯುಸಿ ಪರೀಕ್ಷೆ

30,514 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ಸಿದ್ಧ



ಕಲಬುರಗಿ,ಫೆ.26-

ಪ್ರಸ್ತುತ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳು ಫೆ.28ರಿಂದ ಮಾರ್ಚ್ 17ರವರೆಗೆ ನಡೆಯಲಿವೆ. ಪ್ರತಿದಿನ ಬೆಳಗ್ಗೆ 10ರಿಂದ ಮಧ್ಯಾಹ್ನ 1ರವರೆಗೆ ಪರೀಕ್ಷೆಗಳು ನಡೆಯಲಿವೆ ಎಂದು ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ್ದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳ ಪೂರ್ವಭಾವಿ ಸಭೆಯಲ್ಲಿ ಅಧಿಕಾರಿಗಳೊಂದಿಗೆ ಚರ್ಚಿಸಿ ಅವರು ಮಾತನಾಡಿದರು.

ಪ್ರಸಕ್ತ ಸಾಲಿನಲ್ಲಿ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ 30,514 ವಿದ್ಯಾರ್ಥಿಗಳು ಹಾಜರಾಗಲಿದ್ದಾರೆ. ಅದರಲ್ಲಿ ನಿಯಮಿತ (ರೆಗ್ಯುಲರ್) ವಿದ್ಯಾರ್ಥಿಗಳು 24,914, ಖಾಸಗಿ ವಿದ್ಯಾರ್ಥಿಗಳು 512, ಪುನರಾವರ್ತಿತ ವಿದ್ಯಾರ್ಥಿಗಳು 5,064 ಹಾಗೂ ಫಲಿತಾಂಶ ಸುಧಾರಣೆಗಾಗಿ 24 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದರು.

ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 51 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ನಗರದಲ್ಲಿ 25 ಮತ್ತು ತಾಲ್ಲೂಕು ಪ್ರದೇಶಗಳಲ್ಲಿ 26 ಕೇಂದ್ರಗಳಿವೆ ಎಂದು ಹೇಳಿದರು.

ಪರೀಕ್ಷಾ ಕಾರ್ಯದಲ್ಲಿ ಭಾಗವಹಿಸುವ ಎಲ್ಲರೂ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಧರಿಸಬೇಕು. ಎಲ್ಲಾ ಪರೀಕ್ಷಾ ದಿನಗಳಲ್ಲಿ ಸಿಸಿಟಿವಿ ದೃಶ್ಯಾವಳಿಗಳನ್ನು ಕಡ್ಡಾಯವಾಗಿ ದಾಖಲಿಸಿ, ಒಂದು ಪೆನ್‌ಡ್ರೈವ್‌ನಲ್ಲಿ ಸಂಗ್ರಹಿಸಬೇಕು. ಸಿಸಿಟಿವಿ ದೃಶ್ಯಗಳು ಸ್ಥಗಿತಗೊಂಡಲ್ಲಿ ಕಾನೂನು ಕ್ರಮ ಜರುಗಿಸಲಾ ಗುವುದು ಎಂದು ಎಚ್ಚರಿಸಿದರು.

ಪರೀಕ್ಷಾ ಕೇಂದ್ರದ ಸುತ್ತಮುತ್ತಲಿನ 200 ಮೀಟರ್ ವ್ಯಾಪ್ತಿಯನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ, ಆ ವ್ಯಾಪ್ತಿಯಲ್ಲಿರುವ ಝೆರಾಕ್ಸ , ಸೈಬರ್ ಸೆಂಟರ್ ಹಾಗೂ ಕಂಪ್ಯೂ ಟರ್ ಕೇಂದ್ರಗಳನ್ನು ಪರೀಕ್ಷಾ ಅವಧಿ ಯಲ್ಲಿ ಮುಚ್ಚುವಂತೆ ಆದೇಶ ಹೊರಡಿಸಲಾಗುವುದು ಎಂದು ತಿಳಿಸಿದರು. ಪರೀಕ್ಷಾ ಕೇಂದ್ರಗಳಲ್ಲಿ ಮುಖ್ಯಾಧಿಕಾರಿಗಳನ್ನು ಹೊರತು ಪಡಿಸಿ ಉಳಿದ ಸಿಬ್ಬಂದಿ ಮೊಬೈಲ್ ಫೋನ್, ಸ್ಮಾರ್ಟ್‌ಫೋನ್, ವಾಚ್, ಐಫೋನ್ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ಸಾಧನಗಳನ್ನು ಬಳಸಬಾರದೆಂದು ಸ್ಪಷ್ಟ ಸೂಚನೆ ನೀಡಿದರು.

ಸಭೆಯಲ್ಲಿ ಡಿ.ಸಿ.ಪಿ. ಪ್ರವೀಣ ನಾಯಕ್, ಹೆಚ್ಚುವರಿ ಎಸ್.ಪಿ. ಮಹೇಶ ಮೇಘಣ್ಣನವರ್ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸುರೇಶ ಕೆ. ಅಕ್ಕಣ್ಣ, ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು, ಕಂದಾಯ ಇಲಾಖೆಯ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಕಲ್ಲು ತೂರಾಟ ಖಂಡಿಸಿ ಪ್ರತಿಭಟನೆ



ಬಾಗಲಕೋಟೆ ,ಫೆ.26-

ಶಿವಾಜಿ ಜಯಂತಿ ಅಂಗವಾಗಿ ನಡೆದ ಮೆರವಣಿಗೆ ವೇಳೆ ಉಂಟಾದ ಕಲ್ಲು ತೂರಾಟದ ಹಿನ್ನೆಲೆಯಲ್ಲಿ ವಿವಿಧ ಹಿಂದುತ್ವ ಸಂಘಟನೆಗಳ ಮುಖಂಡರು ಹಾಗೂ ಬಿಜೆಪಿಯ ನಾಯಕರ ನೇತೃತ್ವದಲ್ಲಿ ಸಭೆ ನಡೆಯಿತು.

ಫೆ.26ರಂದು ಬಾಗಲಕೋಟೆ ಚಲೋ ನಡೆಸಲು ನಿರ್ಧರಿಸಲಾಯಿತು. ಕಲ್ಲು ತೂರಾಟ ನಡೆದ ಅದೇ ರಸ್ತೆಯಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಲಾಗುವುದು. ಜಿಲ್ಲೆಯ ಎಲ್ಲಾ ತಾಲೂಕಿನಿಂದ ಮುಖಂಡರು ಭಾಗವಹಿಸುವ ಬಗ್ಗೆ ಸಭೆಯಲ್ಲಿ ತೀರ್ಮಾನಿಸಲಾಯಿತು.

ಶಿವಾಜಿ ಜಯಂತ್ಯೋತ್ಸವ ಕಾರ್ಯಕ್ರಮ ಮರು ಆಯೋಜನೆ ಮಾಡಿ, ಶೋಭಾಯಾತ್ರೆ ಹಮ್ಮಿಕೊಳ್ಳುವ ಬಗ್ಗೆ ನಿರ್ಧಾರ ಮಾಡಲಾಯಿತು.

ಕಲ್ಲು ತೂರಾಟದ ಹಿನ್ನೆಲೆಯಲ್ಲಿ ಮಸೀದಿಯ ಅಧ್ಯಕ್ಷರು ಹಾಗೂ ಕಮಿಟಿಯ ಸದಸ್ಯರ ಮೇಲೆ ಕ್ರಮ ಜರುಗಿಸಬೇಕು. ನಿಷೇದಾಜ್ಞೆಯನ್ನು ತಕ್ಷಣದಿಂದ ಹಿಂಪಡೆಯಬೇಕು. ಜನಸಾಮಾನ್ಯರ ಓಡಾಟ ಸುಗಮಗೊಳಿಸಬೇಕು. ಬಂಧಿಸಿರುವ ಸಂಘ ಪರಿವಾರದ ಕಾರ್ಯಕರ್ತರನ್ನು ಬಿಡುಗಡೆ ಮಾಡಬೇಕು. ಕಲ್ಲು ತೂರಾಟ ಸಮಯದಲ್ಲಿ ಮಸೀದಿಯಲ್ಲಿ ಸೇರಿದ್ದ ಎಲ್ಲ ಜನರಿಗೆ ಬಂಧನ ಮಾಡಬೇಕು ಎಂದು ಒತ್ತಾಯಿಸಲಾಯಿತು. ಈ ಬಗ್ಗೆ ಪ್ರತಿಭಟನೆ ಮಾಡಿ, ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲು ನಿರ್ಧಾರ ಮಾಡಲಾಗಿದೆ ಎಂದು ಮುಖಂಡ ಅಶೋಕ ಲಿಂಬಾವಳಿ ಸಭೆಯ ಬಗ್ಗೆ ಮಾಹಿತಿ ನೀಡಿದರು.

ನಗರದ ಚರಂತಿಮಠ ಶಿವಾನುಭವ ಮಂಟಪದಲ್ಲಿ ನಡೆದ ಸಭೆಯಲ್ಲಿ ಚಿತ್ರದುರ್ಗದ ಸಂಸದ ಗೋವಿಂದ ಕಾರಜೋಳ, ಬಾಗಲಕೋಟೆ ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣ ಸಾ ಭಾಂಡೆಗೆ ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಮತ್ತಿತರರು ಭಾಗವಹಿಸಿದ್ದರು.

ಜೋಳ ಬೆಳೆದ ರೈತ ಸಂಕಷ್ಟದಲ್ಲಿ ಶಾಸಕ ಹಂಪನಗೌಡ ಬಾದರ್ಲಿ ವಿದೇಶದಲ್ಲಿ ವೆಂಕಟರಾವ್ ನಾಡಗೌಡ

ಸಿಂಧನೂರು :ಫೆಬ್ರವರಿ. :26:

ತಾಲೂಕಿನಲ್ಲಿ ಜೋಳ ಖರೀದಿ ಆದೇಶ ಮಾಡಿ. 11 ದಿನಗಳು ಆಗಿದೆ. ತಾಲೂಕಿನಾದ್ಯಂತ ಜೋಳ ಖರೀದಿ ಕೇಂದ್ರಗಳನ್ನು ಇನ್ನು ಪ್ರಾರಂಭಿಸದೆ ಇರುವುದರಿಂದ. ರೈತರು ಸಂಕಷ್ಟದಲ್ಲಿದ್ದಾರೆ. ಆದರೆ ಶಾಸಕರು ಮಾತ್ರ ವಿದೇಶ ಪ್ರವಾಸದಲ್ಲಿದ್ದಾರೆ. ಇದು ಈ ಪರಿಸ್ಥಿತಿಯಲ್ಲಿ ಬೇಕಿತ್ತಾ. ಎಂದು. ಮಾಜಿ ಸಚಿವ ವೆಂಕಟರಾವ್ ನಾಡಗೌಡ ಪ್ರಶ್ನಿಸಿದರು. ಅವರು ಇಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನು.ನಡೆಸಿ ಮಾತನಾಡಿದ ಅವರು. ಬೆಳೆ ಕಟಾವು ಮಾಡಿದ 15 ದಿನಗಳಲ್ಲಿ ಪ್ರಾರಂಭಿಸಬೇಕಾದ ಖರೀದಿ ಕೇಂದ್ರಗಳು ತಿಂಗಳಾದರೂ ಪ್ರಾರಂಭವಾಗಿಲ್ಲ. ಆದರೆ ಯಾವ ಪುರುಷಾರ್ಥಕ್ಕಾಗಿ ಜೋಳ ಖರೀದಿ ಕೇಂದ್ರಗಳು ಪ್ರಾರಂಭಿಸಿರುತ್ತಾರೆ. ತಿಳಿಯುತ್ತಿಲ್ಲ. ಖಾಲಿ ಚೀಲಗಳು ಬಂದಿಲ್ಲ. ವಾಹನದ ವ್ಯವಸ್ಥೆ ಇಲ್ಲ.ಗೋಡೌನ್ ಖರೀದಿ ಪ್ರಾರಂಭಕ್ಕೂ ಮುನ್ನವೇ ಸಿದ್ಧತೆ ಮಾಡಿಕೊಳ್ಳಬೇಕು. ಆದರೆ ಈ ಸರ್ಕಾರದಲ್ಲಿ ಅಧಿಕಾರಿಗಳು ಕೆಲಸ ಮಾಡುವಲ್ಲಿ ಗಂಭೀರತೆಯನ್ನು ಕಳೆದುಕೊಂಡಿದ್ದಾರೆ. ಖರೀದಿಗೆ ಸರಿಯಾಗಿ ಖಾಲಿ ಚೀಲ ವಾಹನ ಗೌಡನ ವ್ಯವಸ್ಥೆ ಮಾಡಿ ಅಕ್ರಮ ಜೋಳ ಖರೀದಿ ತಡೆಯಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಬೇರೆ ಬೇರೆ ತಾಲೂಕುಗಳಿಂದ ಅಂದರೆ. (ದೇವದುರ್ಗ. ಸಿರವಾರ್) . ಜೋಳ ಖರೀದಿ ಆಗುವ ಶಂಕೆ ವ್ಯಕ್ತವಾಗಿದೆ. ಬೇರೆಯವರು ನಿಮ್ಮ ಹೆಸರಿನಲ್ಲಿ ಜೋಳ ಖರೀದಿಗೆ. ಅವಕಾಶ ಕೊಡದಂತೆ. ನಾಡಗೌಡ ರೈತರಿಗೆ ಮನವಿ ಮಾಡಿದರು. ರಾಜ್ಯ ಸರ್ಕಾರ ದಿವಾಳಿಯಾಗಿದೆ. ಸೊಸೈಟಿಗಳಿಗೆ ಎರಡು-ಮೂರು ವರ್ಷದ ಕಮಿಷನ್ ಹಣ ಇನ್ನು ಬಂದಿಲ್ಲ. ಮಾನ್ವಿ ತಾಲೂಕಿಗೆ ಒಂದು ಕೋಟಿ. ತಾಲೂಕಿನ ಜವಳಗೇರಾ ಕ್ಕೆ.15 ರಿಂದ. 20 ಲಕ್ಷ.ಕಮಿಷನ್ ಹಣ ಬರಬೇಕಿದೆ. ಇದಕ್ಕೆಲ್ಲ ಆಡಳಿತದ. ದುರ್ ವ್ಯವಸ್ಥೆ. ಕಾರಣ ಎಂದು ಆರೋಪಿಸಿದರು. ರಾಜ್ಯ. ಕಾಂಗ್ರೆಸ್ ಸರ್ಕಾರ. ಶಾಸಕರು ಹಾಗೂ ಅಧಿಕಾರಿಗಳು. ಆಡಳಿತ. ವ್ಯವಸ್ಥೆಯನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿದ್ದಾರೆ. ಅಧಿಕಾರಿಗಳಿಗೆ. ಯಾವುದೇ ರೀತಿಯ. ಭಯವಿಲ್ಲದಂತಾಗಿದೆ. ಇಂತಹ ಪರಿಸ್ಥಿತಿಯಲ್ಲಿ. ಶಾಸಕ ಹಂಪನಗೌಡ ಬಾದರ್ಲಿ ಅವರು ವಿದೇಶಕ್ಕೆ ಹಾರಿದ್ದಾರೆ. ಮಳೆ ಬಂದರೆ ರೈತರ ಜೋಳ ಸಂಪೂರ್ಣ ನಾಶವಾಗುತ್ತದೆ. ಈಗಾಗಲೇ ಅನೇಕ ರೈತರು ತಮ್ಮ ಜೋಳಗಳನ್ನು ಮಾರಿಕೊಂಡಿದ್ದಾರೆ. ಆದ್ದರಿಂದ ಕೂಡಲೇ. ಸಂಬಂಧಪಟ್ಟ ಅಧಿಕಾರಿಗಳು. ಕೂಡಲೇ ಜೋಳ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲು. ಒತ್ತಾಯಿಸಿದರು. ಈ ಸಂದರ್ಭದಲ್ಲಿ. ಮುಖಂಡರಾದ. ಜಿ ಸತ್ಯನಾರಾಯಣ. ದೇವೇಂದ್ರಪ್ಪ ಗೌಡ. ದಾಸರೀ ಸತ್ಯನಾರಾಯಣ. ವೆಂಕೋಬ ಕಲ್ಲೂರ್. ಅಲ್ಲಮಪ್ರಭು ಪೂಜಾರ್. ಎಸ್ ಪಿ.ಟೈಲರ್. ಸಣ್ಣ ವೀರಭದ್ರಪ್ಪ.ಕುರುಕುಂದ. ಸೈಯದ್ ಆಸಿಫ್. ಸೇರಿದಂತೆ ಇನ್ನಿತರರು. ಉಪಸ್ಥಿತರಿದ್ದರು.

ಧ್ವಜಗಳ ತೆರವುಗೊಳಿಸಲು ಆಗ್ರಹಿಸಿ ಸಾಮೂಹಿಕ ಸಂಘಟನೆಗಳ ಒಕ್ಕೂಟ ಸುದ್ದಿಗೋಷ್ಠಿ



ಸುರಪುರ,ಫೆ.26-

ನಗರದ ಶ್ರೀ ಪ್ರಭು ಕಾಲೇಜ್ ಮೈದಾನದಲ್ಲಿನ ಭೂಮಿಗಾಗಿ ದಲಿತ ಸಾಮೂಹಿಕ ಸಂಘಟನೆಗಳು ಪ್ರಭು ಕಾಲೇಜ್ ಮೈದಾನದಲ್ಲಿ ಹಾಕಲಾ ಗಿರುವ ಧ್ವಜಗಳ ತೆರವು ಕುರಿತು ನ್ಯಾಯಾಲಯ ನೀಡಿರುವ ಆದೇಶ ವನ್ನು ಪಾಲಿಸಬೇಕು ಅದನ್ನು ವಿರೋಧಿಸುವುದು ಸರಿಯಲ್ಲ ಎಂದು ಸಾಮೂಹಿಕ ಸಂಘಟನೆಗಳ ಒಕ್ಕೂ ಟದ ಮುಖಂಡ ಹಾಗೂ ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕ ಅಧ್ಯಕ್ಷ ವೆಂಕಟೇಶ ನಾಯಕ ಬೈರಿಮಡ್ಡಿ ಅಸಮಾಧಾನ ವ್ಯಕ್ತಪಡಿಸಿದರು.

ಪಟ್ಟಣದ ಮಹಾತ್ಮ ಗಾಂಧಿ ವೃತದಲ್ಲಿನ ಧರಣಿ ಸ್ಥಳದಲ್ಲಿ ಗುರುವಾರ ರಾತ್ರಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ಈಗಾಗಲೇ ತಹಶೀಲ್ದಾರರು ಸಾಮೂಹಿಕ ಸಂಘಟನೆಗಳ ಒಕ್ಕೂಟದ ಮುಖಂಡ ರೊಂದಿಗೆ ಸಭೆ

ನಡೆಸಿದಾಗ ನಾವು ನ್ಯಾಯಾಲಯದ ಆದೇಶದಂತೆ ಹಾಕಿರುವ ಧ್ವಜಗಳನ್ನು ತೆರವುಗೊಳಿಸಲು ಸಿದ್ಧರಿದ್ದೇವೆ ಮೊದಲು ದಲಿತ ಸಂಘಟನೆಗಳಿಂದ ಹಾಕಲಾಗಿರುವ ಧ್ವಜಗಳನ್ನು ತೆರವುಗೊಳಿಸುವಂತೆ ತಿಳಿಸಿದ್ದೇವೆ.

ಇಂದು ತಹಸಿಲ್ದಾರ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ದಲಿತ ಸಂಘಟನೆಗಳ ಮುಖಂಡರು ಧ್ವಜಗಳನ್ನು ತೆರವುಗೊಳಿಸುವುದಿಲ್ಲ ಎಂದು ಹೇಳಿದ್ದು ಅಧಿಕಾರಿಗಳು ಮತ್ತು ನ್ಯಾಯಾಲಯದ ಆದೇಶಕ್ಕೂ ವಿರೋಧ ವ್ಯಕ್ತಪಡಿಸಿರುವುದು ಸರಿಯಾದ ನಡೆಯಲ್ಲ. ಆದರಿಂದ ನಾವು ಈಗಾಗಲೇ ಪ್ರಭು ಕಾಲೇಜ್ ಮೈದಾನದ ಬಳಿಯಲ್ಲಿನ ಅಂಗಡಿಗಳ ಬೀಗ ತೆರೆಯುವಂತೆ, ಜಿಲ್ಲಾಧಿಕಾರಿಗಳು ಭೂಮಿ ಹಂಚಿಕೆ ಮಾಡಿ ಹೊರಡಿಸಿದ ಆದೇಶ ರದ್ದುಗೊಳಿಸುವಂತೆ ಹಾಗೂ ಪ್ರಭು ಕಾಲೇಜ್ ಮೈದಾನದಲ್ಲಿ ಹಾಕಲಾಗಿರುವ ಧ್ವಜಗಳನ್ನು ತೆರವುಗೊಳಿಸುವಂತೆ ಆಗ್ರಹಿಸಿ ಸುರಪುರ ಬಂದ್ ಮಾಡಿ ನಂತರ ನಿರಂತರ ಧರಣಿಯನ್ನು ನಡೆಸಿದ್ದೆವು.

ನಮ್ಮ ಮನವಿಯಂತೆ ಈಗಾಗಲೇ ಎರಡು ಬೇಡಿಕೆಗಳು ಈಡೇರಿದ್ದು ಧ್ವಜಗಳ ತೆರವುಗೊಳಿಸಲು ಅಧಿಕಾರಿಗಳು ನಾಲ್ಕು ದಿನಗಳ ಸಮಯಾವಕಾಶ ತೆಗೆದುಕೊಂಡಿದ್ದರಿಂದ ನಾವು ಕೂಡ ಒಪ್ಪಿಕೊಂಡಿದ್ದೆವು ಆದರೆ ಶನಿವಾರ ಧ್ವಜಗಳನ್ನು ತೆರವುಗೊಳಿಸದಿದ್ದಲ್ಲಿ ನಮ್ಮ ಧರಣಿ ಉಗ್ರ ಸ್ವರೂಪ ಪಡೆಯಲಿದ್ದು ಹೆದ್ದಾರಿಯನ್ನು ತಡೆದು ಪ್ರತಿಭಟನೆಯನ್ನು ನಡೆಸಲಿದ್ದೇವೆ ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ರಮೇಶ ದೊರೆ ಅಲ್ದಾಳ, ಭೀಮುನಗೌಡ ಹೆಮನೂರ, ಹಣಮಂತ ಕಟ್ಟಿಮನಿ, ಶಿವ ಮೋನಯ್ಯ ನಾಯಕ, ಚಂದ್ರು ಎಲಿಗಾರ, ವೆಂಕಟೇಶ ಬೇಟೆಗಾರ, ರಾಘವೇಂದ್ರ ಕುಲಕರ್ಣಿ, ದೇವೇಂದ್ರಪ್ಪ ಮಾಲಿ ಪಾಟೀಲ, ಮಲ್ಲು ದಂಡಿನ್, ವಿನಾಯಕ ಕರಡಕಲ್, ಗಂಗಾಧರ ನಾಯಕ,ಶರಣು ನಾಯಕ, ರಂಗನಾಥ ನಾಯಕ, ಭೀಮು ನಾಯಕ ಮಲ್ಲಿಬಾವಿ, ಮಲ್ಲಪ್ಪ ಹುಬ್ಬಳ್ಳಿ, ಬಸವರಾಜ ಕೋನ್ಹಾಳ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಇಂದು ಪಶು ಹಾಗೂ ಮೀನುಗಾರಿಕೆ ವಿವಿಯ 15ನೇ ಘಟಿಕೋತ್ಸವ-ಪ್ರೊ. ಕೆ.ಸಿ ವೀರಣ್ಣ

ಬೀದರ, ಫೆ.27-

ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬೀದರನ 15ನೇ ಘಟಿಕೋತ್ಸವವನ್ನು ಫೆಬ್ರವರಿ.27 ರಂದು ಬೆಳಿಗ್ಗೆ 10 ಗಂಟೆಗೆ ವಿಶ್ವವಿದ್ಯಾಲಯದ ಆಡಿಟೊರಿಯಂ, ನಂದಿನಗರ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಕೆ. ಸಿ. ವೀರಣ್ಣ ಹೇಳಿದರು.

ಅವರು ಗುರವಾರ ನಗರದ ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಆಡಳಿತ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದರು.

ರಾಜ್ಯಪಾಲರು ಹಾಗೂ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಶ್ರೀ ಥಾವರ್‌ಚಂದ್ ಗೆಹ್ಲೋಟ್ ಅವರು 15ನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ, ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಿದ್ದಾರೆ. ಅತಿಥಿಗಳಾಗಿ ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವರು ಹಾಗೂ ವಿಶ್ವವಿದ್ಯಾಲಯದ ಸಹಕುಲಾಧಿಪತಿಗಳಾದ ಕೆ. ವೆಂಕಟೇಶ, ಮುಖ್ಯ ಅಥಿಗಳಾಗಿ ಇಕ್ರಿಸ್ಯಾಟ್,



ಹೈದ್ರಾಬಾದನ ಮಹಾನಿರ್ದೇಶಕ ಡಾ. ಹಿಮಾಂಶು ಪಾಠಕ ಭಾಗವಹಿಸಲಿದ್ದಾರೆ.

ಘಟಿಕೋತ್ಸವದಲ್ಲಿ ಒಟ್ಟು 576 ವಿದ್ಯಾರ್ಥಿಗಳಿಗೆ ಪದವಿಯನ್ನು ಪ್ರದಾನ ಮಾಡಲಾಗುತ್ತಿದ್ದು, ಇದರಲ್ಲಿ 455 ಸ್ನಾತಕ ಪದವೀಧರರು, 107 ಸ್ನಾತಕೋತ್ತರ ಹಾಗೂ 14 ಡಾಕ್ಟರೇಟ್ ಪದವಿಧರರು ಸೇರಿದ್ದಾರೆ. ಘಟಿಕೋತ್ಸವದ ದಿನದಂದು 94 ಪದವೀಧರರು ಉಪಸ್ಥಿತರಾಗಿ ಪದವಿ ಪಡೆಯುತ್ತಿದ್ದಾರೆ. ಅದೇ ರೀತಿ ಒಟ್ಟು 34 ಪ್ರತಿಭಾನ್ವಿತ ಸ್ನಾತಕ, ಸ್ನಾತಕೋತ್ತರ ಮತ್ತು ಡಾಕ್ಟರೇಟ್ ಪದವಿಧರರಿಗೆ ಚಿನ್ನದ ಪದಕಗಳನ್ನು ನೀಡಿ ಗೌರವಿಸಲಾಗುತ್ತಿದೆ. ಅದರಲ್ಲಿ 21 ವಿಶ್ವವಿದ್ಯಾಲಯದ ಪದಕಗಳು ಮತ್ತು 60 ಪ್ರಾಯೋಜಿತ ಚಿನ್ನದ ಪದಕಗಳಾಗಿವೆ ಎಂದು ಹೇಳಿದರು.

ಸ್ನಾತಕ ಪದವಿಯಲ್ಲಿ 17 ವಿದ್ಯಾರ್ಥಿಗಳು- 49 ಚಿನ್ನದ ಪದಕಗಳು ಪಡೆಯಲಿದ್ದಾರೆ ಇದರಲ್ಲಿ ಶಿವಮೊಗ್ಗದ ಖುಷಿ 16 ಚಿನ್ನದ ಪದಕ, ಬೀದರನ ದೇವರಾಜ್ 4 ಪದಕ ಸೇರಿದಂತೆ ಇತರೆ ವಿದ್ಯಾರ್ಥಿಗಳು ಪದಕ ಪಡೆದಿದ್ದಾರೆ. ಸ್ನಾತಕೋತ್ತರ ಪದವಿಯಲ್ಲಿ 15 ವಿದ್ಯಾರ್ಥಿಗಳು 30 ಚಿನ್ನದ ಪದಕ, ಡಾಕ್ಟರೇಟ್ ಪದವಿಯಲ್ಲಿ 2 ವಿದ್ಯಾರ್ಥಿಗಳು 2 ಚಿನ್ನದ ಪದಗಳನ್ನು ಪಡೆದಿದ್ದಾರೆಂದರು.

ವಿಶ್ವವಿದ್ಯಾಲಯ ವ್ಯಾಪ್ತಿಯಲ್ಲಿ 9 ಮಹಾವಿದ್ಯಾಲಯಗಳಿವೆ. ನೂತನವಾಗಿ ಪುತ್ತೂರಿನಲ್ಲಿ ಒಂದು ಪಶು ವೈದ್ಯಕೀಯ ಮಹಾವಿದ್ಯಾಲಯ ಸ್ಥಾಪನೆ ಕಾರ್ಯ

ಪ್ರಾರಂಭದಲ್ಲಿದೆ. ರೈತರ ಆದಾಯ ದ್ವಿಗುಣಗೊಳಿಸಲು ಮತ್ತು ಉತ್ಪಾದನೆ ಹೆಚ್ಚಿಸುವ ಉದ್ದಶದಿಂದ ಹತ್ತು ಸಂಶೋಧನೆ ಹಾಗೂ ಮಾಹಿತಿ ಕೇಂದ್ರಗಳು ಕೆಲಸ ಮಾಡುತ್ತಿವೆ. ವಿವಿಧ ಸಂಸ್ಥೆಗಳಿಂದ ಧನಸಹಾಯ ಪಡೆದು ಸಂಶೋಧನೆ ಕೈಗೊಳ್ಳಲಾಗುತ್ತಿದೆ. ಪಶುವೈದ್ಯಕೀಯ ವಿಜ್ಞಾನ ಕ್ಷೇತ್ರದ ವಿಜ್ಞಾನಿಗಳು ಮಾನವ ಮತ್ತು ಪ್ರಾಣಿಗಳ ಮೇಲೆ ಗಂಭೀರ ಪರಿಣಾಮ ಬೀರುವ ಬ್ರುಸಲೋಸಿಸ್, ರೇಬಿಸ್, ಎವಿಯನ್ ಇನ್ನು ಎಂಜಾ, ಅಂತ್ರಾಕ್ಸ್ ಮತ್ತು ಮೇಲೆ ಹೊಸ ಸಂಶೋಧನಾ ಯೋಜನೆಗಳನ್ನು ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ಹಾವಿನ 'ಆಂಟಿ-ವೆನಮ್' ತಯ್ಯಾರಿಸುವ ಕೆಲಸ ಸಹ ಪ್ರಗತಿಯಲ್ಲಿದೆ ಎಂದರು.

ಈ ಪತ್ರಿಕಾಗೊಷ್ಟಿಯಲ್ಲಿ ವಿಶ್ವವಿದ್ಯಾಲಯ ಕುಲಸಚಿವ ಪ್ರೊ. ಪಿ.ಟಿ ರಮೇಶ್, ಪ್ರಮುಖರಾದ ಡಾ. ಮಂಜುನಾಥ್, ರಾಮಚಂದ್ರ ನಾಯಕ, ಶಿವಪ್ರಕಾಶ್, ಸೇರಿದಂತೆ ವ್ಯವಸ್ಥಾಪಕ ಮಂಡಳಿ ಸೇರಿದಂತೆ ವಿದ್ಯಾ ವಿಷಯ ಪರಿಷತ್ ಸದಸ್ಯರು ಉಪಸ್ಥಿತರಿದ್ದರು.

ಮಕ್ಕಳ ಕೈಯಲ್ಲಿ ಮೊಬೈಲ್ ಕೊಡುವುದು ತುಂಬಾ ಅಪಾಯಕಾರಿ: ವಿಶ್ವಾರಾಧ್ಯ ಶ್ರೀ

ಅಫಜಲಪುರ,ಫೆ.27-

ಪಟ್ಟಣದ ಶ್ರೀ ಶಿವಲಿಂಗೇಶ್ವರ ಬಾಲ ಭಾರತಿ ವಿದ್ಯಾ ಮಂದಿರ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಶಿವಲಿಂಗೇಶ್ವರ ಪ್ರೌಢ ಶಾಲೆಗಳ 37ನೇ ವಾರ್ಷಿಕ ಸ್ನೇಹ ಸಮ್ಮೇಳನವು ಗುರುವಾರ ಸಂಜೆ ಶಾಲಾ ಆವರಣದಲ್ಲಿ ಅದ್ದೂರಿಯಾಗಿ ಜರುಗಿತು.

ಅಫಜಲಪುರ ಶ್ರೀ ಮಳೇಂದ್ರ ಸಂಸ್ಥಾನ ಹಿರೇಮಠದ ಶ್ರೀ ವಿಶ್ವಾರಾಧ್ಯ ಮಳೇಂದ್ರ ಶಿವಾಚಾರ್ಯರು ಸಾನಿಧ್ಯ ವಹಿಸಿ ಮಾತನಾಡಿದ ಅವರು, ''ಈ ಶಿಕ್ಷಣ ಸಂಸ್ಥೆ ಹೆಮ್ಮರದಂತೆ ಬೆಳೆದು ಸಮಾಜಕ್ಕೆ ಉತ್ತಮ ಪ್ರಜೆಗಳನ್ನು ರೂಪಿಸುತ್ತಿದೆ. ಆದರೆ ಇಂದಿನ ದಿನಗಳಲ್ಲಿ ಮಕ್ಕಳ ಕೈಯಲ್ಲಿ ಮೊಬೈಲ್ ನೀಡುವುದು ಅಪಾಯಕಾರಿಯಾಗಿದೆ ಎಂದರು. ಮಕ್ಕಳಿಗೆ ಉತ್ತಮ ಸಂಸ್ಕಾರ, ವಿಚಾರಶೀಲತೆ, ಆಚಾರ-ವಿಚಾರ ಮತ್ತು ಒಳ್ಳೆಯ ಭಾವನೆಗಳನ್ನು ನೀಡುವುದು ತಂದೆ-ತಾಯಿಗಳ ಕರ್ತವ್ಯ,'' ಎಂದು ಸ್ಪಷ್ಟ ಸಂದೇಶ ನೀಡಿದರು.

ಸಮಾರಂಭದ ಅಂಗವಾಗಿ ವಿದ್ಯಾರ್ಥಿಗಳಿಂದ ಮನಮೋಹಕ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿ ಪೋಷಕರ ಮೆಚ್ಚುಗೆಗೆ ಪಾತ್ರವಾದವು. ಇದೇ ಸಂದರ್ಭದಲ್ಲಿ ಎಸ್ಸೆಸ್ಸೆಲ್ಸಿ



ಹಾಗೂ ಪಿ.ಯು.ಸಿ. ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದು ಶಾಲೆಗೆ ಕೀರ್ತಿ ತಂದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಶುಭ ಹಾರೈಸಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಚಂದ್ರಶೇಖರ ನಿಂಬಾಳ, ಕಾರ್ಯದರ್ಶಿ ಮಳೇಪ್ಪ ಸಿ. ಡಾಂಗೆ, ಉಪಾಧ್ಯಕ್ಷ ಮಹಾದೇವಪ್ಪ ಕಲಕೇರಿ, ಸದಸ್ಯರಾದ ಶಂಕ್ರಯ್ಯ ಹಿರೇಮಠ, ಸಂಗಪ್ಪ ನೂಲಾ, ಮಲ್ಲಿಕಾರ್ಜುನ ಕಣ್ಣಿ, ಮಹಾಂತೇಶ ಮಸಳಿ, ಶಿಕ್ಷಣ ಇಲಾಖೆಯ ಸಂಪನ್ಮೂಲ ಅಧಿಕಾರಿ ಸಿದ್ದಪ್ಪ ಬಿರಾದಾರ ಹಾಗೂ ಬಿ.ಆರ್.ಪಿ. ವಿಠಲ ಹಡಪ, ಪ್ರಾಥಮಿಕ ಶಾಲೆ ಮುಖ್ಯ ಗುರು ಮನೋಜಕುಮಾರ ವಾಲಿ ಉಪಸ್ಥಿತಿರಿದ್ದರು.

ಸಂಸ್ಥೆಯ ಆಡಳಿತ ಅಧಿಕಾರಿ ಅಂಬೇಡ್ಕರ್ ತಳಕೇರಿ ಪ್ರಸ್ತಾವಿಕವಾಗಿ ಮಾತನಾಡಿದರು. ಶಿವಕುಮಾರ ಬಿರಾದಾರ ಸ್ವಾಗತಿಸಿದರು. ಸಿದ್ದು ಉಡಚಣ ಹಾಗೂ ಅಣವೀರಯ್ಯ ಹಿರೇಮಠ ನಿರೂಪಿಸಿದರು. ಸುಜಾತ ಬಿರಾದಾರ ವಂದಿಸಿದರು.

ಬಳ್ಳಾರಿ ಪೊಲೀಸ್ ರನ್: ಮಾ.01 ರಂದು ಮ್ಯಾರಥಾನ್ ಮತ್ತು ವಾಕಥಾನ್

ಬಳ್ಳಾರಿ,ಫೆ.27-

ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಜೆಎಸ್‌ಡಬ್ಲ್ಯೂ, ಬಿಎಂಎಂ ಸಹಯೋಗದಲ್ಲಿ ಸಾರ್ವಜ ನಿಕರಲ್ಲಿ ಸಾಮಾಜಿಕ ಜಾಗೃತಿ ಮೂಡಿಸುವ ನಿಟ್ಟನಲ್ಲಿ ಮಾ.01 ರಂದು ಬೆಳಿಗ್ಗೆ 07 ಗಂಟೆಗೆ ನಗರದ ಡಿ.ಎ.ಆರ್ ಪೊಲೀಸ್ ಮೈದಾನದಲ್ಲಿ ಬಳ್ಳಾರಿ ಪೊಲೀಸ್ ರನ್ (ಮ್ಯಾರಥಾನ್ ಮತ್ತು ವಾಕಥಾನ್) ಆಯೋಜಿಸಲಾಗಿದೆ.

ಮಹಿಳೆಯರು ಮತ್ತು ಮಕ್ಕಳ ಮೇಲಿನ ದೌರ್ಜನ್ಯ ತಡೆ, ರಸ್ತೆ ಸುರಕ್ಷತೆ, ಸೈಬರ್ ಅಪರಾಧಗಳ ಬಗ್ಗೆ ಎಚ್ಚರಿಕೆ ಹಾಗೂ ಮಾದಕ ದ್ರವ್ಯ ಮುಕ್ತ ಸಮಾಜ ನಿರ್ಮಾಣದ ಉದ್ದೇಶದೊಂದಿಗೆ 'Run for Awareness, Run for Strength, Run for Ballari' ಎಂಬ ಘೋಷವಾಕ್ಯದಡಿ ಈ ಓಟ ಹಮ್ಮಿಕೊಳ್ಳಲಾಗಿದೆ.

ಓಟದ ವಿಭಾಗ ಮತ್ತು



ಮಾರ್ಗ: 2ಕೆ ವಾಕಥಾನ್ (ಹಿರಿಯ ನಾಗರಿ ಕರಿಗಾಗಿ): ಡಿ.ಎ.ಆರ್ ಮೈದಾನ- ಸಂಗಮ್ ವೃತ್ತ- ಗಡಿಗಿ ಚೆನ್ನಪ್ಪ ವೃತ್ತ- ಹಳೆ ಕೋರ್ಟ್ ರಸ್ತೆ- ಡಿ.ಎ.ಆರ್ ಮೈದಾನ.

5ಕೆ ಮ್ಯಾರಥಾನ್: ಡಿ.ಎ.ಆರ್ ಮೈದಾನ- ಗಡಿಗಿ ಚೆನ್ನಪ್ಪ ವೃತ್ತ- ಬೆಂಗಳೂರು ರಸ್ತೆ- ಹೆಚ್.ಆರ್. ಗವಿಯಪ್ಪ ವೃತ್ತ- ರೈಲ್ವೆ ಸ್ಟೇಷನ್ ರಸ್ತೆ ಮೂಲಕ ಮರಳಿ ಡಿಎಆರ್ ಪೊಲೀಸ್ ಮೈದಾನಕ್ಕೆ ಅಂತ್ಯಗೊಳ್ಳಲಿದೆ.

10ಕೆ ಮ್ಯಾರಥಾನ್: ಡಿ.ಎ.ಆರ್ ಮೈದಾನದಿಂದ ಪ್ರಾರಂಭವಾಗಿ ಸಂಗಮ್ ವೃತ್ತ- ಗಡಿಗಿ ಚೆನ್ನಪ್ಪ ವೃತ್ತ- ಬೆಂಗಳೂರು ರಸ್ತೆ- ಬ್ರೂಸ್ ಪೇಟೆ ಪೊಲೀಸ್ ಠಾಣೆ ಮುಂಭಾಗ- ಹೆಚ್.ಆರ್. ಗವಿಯಪ್ಪ ವೃತ್ತ- ಡಾ.ಬಿ.ಆರ್.ಅಂಬೇಡ್ಕರ್ ವೃತ್ತ- ವಾಲ್ಮೀಕಿ ವೃತ್ತ(ಎಸ್‌ಪಿ ವೃತ್ತ)- ಕನಕ ದುರ್ಗಮ್ಮ ದೇವಸ್ಥಾನ- ಮೋಕಾ ರಸ್ತೆ- ಭಾರತೀಯ ಮಿಲ್ಕ್ ಡೈರಿ ಮೂಲಕ ಮರಳಿ ಬಸವೇಶ್ವರ ನಗರ ಮುಖ್ಯ ರಸ್ತೆ- ಎಸ್.ಎನ್ ಪೇಟೆ ಫ್ಲೈ ಓವರ್ ಮೂಲಕ ಸಾಗಿ ಮರಳಿ ಡಿಎಆರ್ ಮೈದಾನದಲ್ಲಿ ಮುಕ್ತಾ ಯಗೊಳ್ಳಲಿದೆ. ವಿಜೇತರಿಗೆ ಆಕರ್ಷಕ ನಗದು ಬಹುಮಾನ ಗಳನ್ನು ವಿತರಿಸಲಾ ಗುವುದು.

ನಗದು ಬಹುಮಾನ ವಿವರ: 5ಕೆ ಮ್ಯಾರಾಥಾನ್: ಪ್ರಥಮ- 10,000, ದ್ವಿತೀಯ- 7,000 ಮತ್ತು ತೃತೀ ಯ- 4,000. 10ಕೆ ಮ್ಯಾ ರಾಥಾನ್: ಪ್ರಥಮ- 15,000, ದ್ವಿತೀಯ- 10,000 ಮತ್ತು ತೃತೀಯ- 7,000.

ಇದರ ಜೊತೆಗೆ, ಓಟದ ನಂತರ ಡಿ.ಎ.ಆರ್ ಮೈದಾನದಲ್ಲಿ ಕ್ವಿಜ್ ಸ್ಪರ್ಧೆ ಏರ್ಪಡಿಸಲಾಗಿದ್ದು, ಸರಿಯಾದ ಉತ್ತರ ನೀಡಿದವರಿಗೆ ಹೆಲ್ಮೆಟ್ ಬಹುಮಾನವಾಗಿ ನೀಡಲಾಗುವುದು. ಶಾಲಾ-ಕಾಲೇಜು ವಿದ್ಯಾರ್ಥಿ ಗಳು, ಸರ್ಕಾರಿ ಮತ್ತು ಖಾಸಗಿ ನೌಕರರು, ಯುವಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮ ನ್ ಡಿ.ಪನ್ನೇಕರ್ ಅವರು ತಿಳಿಸಿದ್ದಾರೆ.

ಮ್ಯಾರಾಥಾನ್ ಓಟಕ್ಕಾಗಿ ಸಿದ್ದಪಡಿಸಲಾದ ವಿಶೇಷ ಟಿ-ಶರ್ಟ್‌ಗಳನ್ನು ಇತ್ತೀಚೆಗೆ ಬಿಡುಗಡೆಗೊಳಿಸಲಾಯಿತು.

ಟ್ರಾಫಿಕ್ ಸಮಸ್ಯೆ ಹಂತ-ಹಂತವಾಗಿ ಪರಿಹಾರ ಕ್ರಮ

ಬಳ್ಳಾರಿ,ಫೆ.27-

ನಗರದಲ್ಲಿ ಟ್ರಾಫಿಕ್ ಸಮಸ್ಯೆಗೆ ಸಂಬಂಧಿಸಿದಂತೆ ಹಂತ-ಹಂತವಾಗಿ ಪರಿಹಾರ ಮಾರ್ಗ ಕಂಡುಕೊಂಡು ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪನ್ನೇಕರ್ ಅವರು ಹೇಳಿದರು.

ಜಿಲ್ಲಾ ಪೊಲೀಸ್ ಇಲಾಖೆ, ಸಂಚಾರ ಪೊಲೀಸ್ ಠಾಣೆ ವತಿಯಿಂದ ನಗರದಲ್ಲಿ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಸಂಚಾರ ದಟ್ಟಣೆ, ಇದರಿಂದಾಗಿ ಸಾರ್ವಜನಿಕರಿಗೆ ಆಗುವ ಸಮಸ್ಯೆ ಹಾಗೂ ಪರಿಹಾರ ಕುರಿತು ಚರ್ಚಿಸಲು ನಗರದ ಬಿಡಿಎಎ ಮೈದಾನದ ಸಭಾಂಗ ಣದಲ್ಲಿ ಗುರುವಾರ ಏರ್ಪಡಿಸಿದ್ದ ಸಂಚಾರ ಜನ ಸಂಪರ್ಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಟ್ರಾಫಿಕ್ ಸಮಸ್ಯೆ ನಿವಾರಣೆಗೆ ಎಲ್ಲಾ ಇಲಾಖೆಗಳ ಅಗತ್ಯ ಸಹಕಾರದೊಂದಿಗೆ ಆಟೋ, ಲಾರಿ, ಕಿರಾಣಿ ಅಂಗಡಿ- ಬೀದಿ ಬದಿ ವ್ಯಾಪಾ ರಸ್ಥರು ಹಾಗೂ ವಿವಿಧ ಸಂಘ- ಸಂಸ್ಥೆಗಳ ಪದಾಧಿಕಾರಿಗಳ ಕೈಜೋಡಿಸುವಿಕೆಯ ಅಭಿಮತ ಬೇಕಿದೆ ಎಂದರು.

ನಗರದಲ್ಲಿ ಟ್ರಾಫಿಕ್ ಕುರಿತಂತೆ ಸಮಸ್ಯೆಗಳನ್ನು ಆಲಿಸಲು ಈ ಸಭೆಯು ಅತ್ಯಂತ ಉಪಯುಕ್ತವಾಗಿದೆ ಎಂದು ಅಭಿಪ್ರಾಯಪಟ್ಟ ಅವರು, ಸಮಸ್ಯೆಗಳನ್ನು ಅರಿತು ಹಂತ- ಹಂತವಾಗಿ ಪರಿಹಾರ ಮಾರ್ಗ ಕಂಡುಕೊಂಡು ಸೂಕ್ತ ಕ್ರಿಯಾಯೋಜನೆ ರೂಪಿಸಿ ಸಾರ್ವ



ಜನಿಕ ಓಡಾಟಕ್ಕೆ ಯಾವುದೇ ರೀತಿಯ ತೊಂದರೆಯಾಗದಂತೆ ಅಗತ್ಯ ಕ್ರಮ ವಹಿಸಲಾಗುವುದು ಎಂದರು.

ವಾಹನ ಸವಾರರು ಸಂಚಾರ ನಿಯಮಗಳನ್ನು ತಪ್ಪದೇ ಪಾಲಿಸಿಕೊಂಡು ನಿಧಾನಗತಿಯಲ್ಲಿ ಚಲಾಯಿಸಬೇಕು. ಯಾವುದೇ ಅಹಿತಕರ ಘಟನೆಗಳಿಗೆ ಆಸ್ಪದ ನೀಡಬಾರದು ಎಂದು ಹೇಳಿದ ಎಸ್ಪಿ ಡಾ.ಸುಮನ್ ಡಿ.ಪನ್ನೇಕರ್ ಅವರು, ನಗರದಲ್ಲಿ ಟ್ರಾಫಿಕ್ ನಿಯಂತ್ರಣಕ್ಕೆ ಜಿಲ್ಲಾ ಪೊಲೀಸ್ ಇಲಾಖೆಯೊಂದಿಗೆ ಸ್ವಯಂ ಪ್ರೇರಿತರಾಗಿ ಟ್ರಾಫಿಕ್ ವಾರ್ಡನ್ ಆಗಿ ಕೆಲಸ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಆಸಕ್ತರು ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಮಹಾನಗರ ಪಾಲಿಕೆ ಮೇಯರ್ ಪಿ.ಗಾದೆಪ್ಪ ಅವರು ಮಾತನಾಡಿ, ಪಾಲಿಕೆ ವ್ಯಾಪ್ತಿಯಲ್ಲಿ ನಡೆಯುತ್ತಿರುವ ವಿವಿಧ ವೃತ್ತ, ಬಡಾವಣೆಗಳಲ್ಲಿ ನಡೆಯುತ್ತಿರುವ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲಾಗುವುದು. ಇದಕ್ಕೆ ಎಲ್ಲರ ಸಹಕಾರವೂ ಅಗತ್ಯವಿದೆ ಎಂದರು.

ನಗರದಲ್ಲಿ ಆಟೋ ಚಾಲಕರು ನಿಧಾನಗತಿಯಲ್ಲಿ ವಾಹನ ಚಲಾಯಿಸಬೇಕು. ತತ್ ಕ್ಷಣ ಬ್ರೇಕ್ ಹಾಕುವುದು, ಹಿಂಬದಿ ಸವಾರರಿಗೆ ತೊಂದರೆ ಉಂಟುಮಾಡುವುದು ಮಾಡಬಾರದು. ಹಾಗಾಗಿ ನಿಧಾನ ಗತಿಯಲ್ಲಿ ವಾಹನ ಚಲಾವಣೆ ಮಾಡಬೇಕು ಎಂದರು.

ಟ್ರಾಫಿಕ್ ಸಮಸ್ಯೆಗೆ ಶಾಶ್ವತ ಪರಿಹಾರ ಮಾರ್ಗ ಕಂಡುಕೊಳ್ಳಲು ಪ್ರಾದೇಶಿಕ ಸಾರಿಗೆ ಇಲಾಖೆ, ಪೊಲೀಸ್ ಇಲಾಖೆಯೊಂದಿಗೆ ಮಹಾನಗರ ಪಾಲಿಕೆಯು ಒಳಗೊಂಡ ಚರ್ಚಿಸಿ ಪೂರಕ ಕ್ರಮ ವಹಿಸಲಾಗುವುದು ಎಂದರು.

ಸಾರ್ವಜನಿಕರಿಂದ ಅಹವಾಲು:

ನಗರದಲ್ಲಿ ಅವಶ್ಯಕತೆ ಇರುವಲ್ಲಿ ಸೂಕ್ತ ಸ್ಥಳ ಗುರುತಿಸಿ, ಆಟೋ ಸ್ಟ್ಯಾಂಡ್ ವ್ಯವಸ್ಥೆ ಕಲ್ಪಿಸಬೇಕು. ನಗರದ ವಿವಿಧೆಡೆ ಸಂಚಾರ ದಟ್ಟಣೆ ಇರುವಲ್ಲಿ ಸ್ಪೀಡ್ ಬ್ರೇಕರ್ ಅಳವಡಿಸಬೇಕು. ಸಂಜೆ ವೇಳೆಯಾದರೆ ನಗರದ ಹೊರಭಾಗದ ಲೇ ಔಟ್ ಗಳಲ್ಲಿ ಮದ್ಯ ಸೇವನೆ, ರಾತ್ರಿಯಾದರೆ ಕಳ್ಳತನ ಪ್ರಕರಣ ಹೆಚ್ಚುತ್ತಿವೆ. ಹಾಗಾಗಿ ಲೇ ಔಟ್ ಮಾಲೀಕರಿಗೆ ಸಿಸಿಟಿವಿ, ಭದ್ರತಾ ಸಿಬ್ಬಂದಿ ನಿಯೋಜಿಸುವಂತೆ ಅವರಿಗೆ ಸೂಕ್ತ ನಿರ್ದೇಶನ ನೀಡ ಬೇಕು. ನಗರದಲ್ಲಿ ಅನಧಿಕೃತ ಚಟುವಟಿಕೆಗಳಿಗೆ ಕಡಿವಾಣ ಹಾಕಬೇಕು ಎಂದು ಸಾರ್ವಜನಿಕರೊಬ್ಬರು ಸಭೆಗೆ ತಿಳಿಸಿದರು.

ಇನ್ನೋರ್ವ ಸಾರ್ವಜನಿಕರೊಬ್ಬರು ಮಾತನಾಡಿ, ನಗರದ ಬೆಂಗಳೂರು ರಸ್ತೆಯಲ್ಲಿ ಪಾದಚಾರಿ ಮಾರ್ಗ ಬೀದಿ ಬದಿ ವ್ಯಾಪಾರಿಗಳಿಂದ ಅತಿಕ್ರಮೇಣಗೊಂಡಿದ್ದು, ಸಾರ್ವಜನಿಕರು ಓಡಾಡಲು ಬಹಳ ತೊಂದರೆಯಾಗುತ್ತಿದೆ. ಹಣ್ಣು ವ್ಯಾಪಾರಿಗಳು ತಳ್ಳುವ ಬಂಡಿಗಳಿಂದ ಧ್ವನಿ ವರ್ಧಕಗಳ ಮೂಲಕ ಅತಿಯಾಗಿ ಶಬ್ದ ಮಾಡಿಕೊಂಡು ಓಡಾಡುತ್ತಿದ್ದು, ಇದು ಸಹ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಸರ್ಕಾರಿ ಬಸ್ ಗಳೇ ರಸ್ತೆಗಳ ಮಧ್ಯದಲ್ಲಿಯೇ ಎಲ್ಲಿ ಅಂದರಲ್ಲಿ ನಿಲುಗಡೆ ಮಾಡುತ್ತಿರುವುದರಿಂದ ಸಂಚಾರಕ್ಕೆ ತೊಂದರೆಯಾಗುತ್ತಿದೆ. ಇವೆಲ್ಲವುಗಳಿಗೂ ಸೂಕ್ತ ಪರಿಹಾರ ಮಾರ್ಗ ಕಲ್ಪಿಸಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಿದರು.

ನಗರದಲ್ಲಿ ಸುಮಾರು 20 ಕ್ಕೂ ಹೆಚ್ಚು ಜನ ಮಹಿಳೆಯರು ಪರವಾನಿಗೆ ಪಡೆದು ಹಣ್ಣು- ತರಕಾರಿ ವ್ಯಾಪಾರ ಮಾಡುತ್ತಿದ್ದೇವೆ. ಆದರೆ ಮಾರಾಟ ಮಾಡಲು ಸೂಕ್ತ ಸ್ಥಳವಿಲ್ಲ, ನಮಗೆ ವ್ಯಾಪಾರಕ್ಕಾಗಿ ಸೂಕ್ತ ಸ್ಥಳ ವ್ಯವಸ್ಥೆ ಮಾಡಿಕೊಡಬೇಕು ಎಂದು ಮಹಿಳಾ ವ್ಯಾಪಾರಿಯೊಬ್ಬರು ಅಧಿಕಾರಿಗಳ ಗಮನಕ್ಕೆ ತಂದರು. ನಗರದಲ್ಲಿ ವಿವಿಧ ಬಡಾವಣೆಗಳ ಮುಖ್ಯರಸ್ತೆಗಳಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿದ್ದು, ಇವುಗಳಿಗೆ ವೇಗ ನೀಡಿ ಸಾರ್ವಜನಿಕರ ಬಳಕೆಗೆ ಅನುವು ಮಾಡಿಕೊಡಬೇಕು ಎಂದು ಸಾರ್ವಜನಿಕರೊಬ್ಬರು ಸಭೆಯಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜು ನಾಥ್, ಹೆಚ್ಚುವರಿ ಪೊಲೀಸ್ ವರಿ ಷ್ಠಾಧಿಕಾರಿಗಳಾದ ಕೆ.ಪಿ.ರವಿ ಕುಮಾರ್ ನವೀನ್ ಕುಮಾರ್ ಪ್ರಾದೇ ಶಿಕ ಸಾರಿಗೆ ಅಧಿಕಾರಿ ನಿಜಾ ಮುದ್ದೀನ್ ಶರೀಫ್, ಲೋಕೋ ಪಯೋಗಿ ಇಲಾಖೆಯ ಅಭಿ ಯಂತರ ಬಸರೆಡ್ಡಿ, ಸಂಚಾರ ಪೊಲೀಸ್ ಠಾಣೆಯ ಆರಕ್ಷಕ ನಿರೀಕ್ಷಕ ರುದ್ರಪ್ಪ ಸೇರಿದಂತೆ ಕೆಕೆಆರ್ಟಿಸಿ, ಕೆಇಬಿ ಅಧಿಕಾರಿಗಳು, ಬಳ್ಳಾರಿ ಚೇಂಬರ್ಸ್ ಆಫ್ ಕಾಮರ್ಸ್ ನ ಅಧ್ಯಕ್ಷರು, ಕಿರಾಣಿ ಅಂಗಡಿ ವ್ಯಾಪಾರಸ್ಥರು, ಖಾಸಗಿ ಬಸ್ ಮಾಲೀ ಕರು- ಚಾಲಕರು, ಲಾರಿ ಸಂಘದ ಅಧ್ಯಕ್ಷರು ಹಾಗೂ ಸದಸ್ಯ ರು, ಆಟೋ ಯೂನಿಯನ್ ಅಧ್ಯ ಕ್ಷರು ಹಾಗೂ ಮಾಲೀಕ- ಚಾಲಕರು, ಟ್ಯಾಕ್ಸಿ ಸಂಘದ ಅಧ್ಯಕ್ಷರು ಹಾಗೂ ಮಾಲಿಕ- ಚಾಲಕರು, ಬೀದಿ ಬದಿ ವ್ಯಾಪಾರಸ್ಥರು ಮತ್ತು ಸಾರ್ವ ಜನಿಕರು ಉಪಸ್ಥಿತರಿದ್ದರು.



ಕಾರಾಗೃಹದ ಬಂದಿಗಳಿಗೆ ವೈಜ್ಞಾನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

ಕಲಬುರಗಿ,ಫೆ.26-

ಕಲಬುರಗಿ ಜಿಲ್ಲಾ ಪಂಚಾಯತ್, ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ, ಪಶುಪಾಲನಾ ಮತ್ತು ಪಶು ವೈದ್ಯಕೀಯ ತರಬೇತಿ ಕೇಂದ್ರ ಹಾಗೂ ಕೇಂದ್ರ ಕಾರಾಗೃಹ ಇವುಗಳ ಸಹಯೋಗದೊಂದಿಗೆ ಕಲಬುರಗಿ ಕೇಂದ್ರ ಕಾರಾಗೃಹದ 51 ಜನ ಕಾರಾಗೃಹದ ಬಂದಿಗಳಿಗೆ ಫೆಬ್ರವರಿ 25 ಹಾಗೂ 26 ರಂದು ಎರಡು ದಿನಗಳ ಕಾಲ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಹಮ್ಮಿಕೊಳ್ಳಲಾಗಿದ್ದ ವೈಜ್ಞಾನಿಕ ಕುರಿ ಮತ್ತು ಮೇಕೆ ತರಬೇತಿ ಸಾಕಾಣಿಕೆ ತರಬೇತಿ ಕಾರ್ಯಕ್ರಮವನ್ನು ಕಲಬುರಗಿ ಪಶುಪಾಲನಾ ಇಲಾಖೆಯ ಉಪ ನಿರ್ದೇಶಕ ಡಾ. ದಯಾನಂದ ಅವರು ಬುಧವಾರ ಉದ್ಘಾಟಿಸಿದರು. ನಂತರ ಅವರು ಮಾತನಾಡಿ, ಬಂದಿಗಳ ಮನಃ ಪರಿವರ್ತನೆ ಹಾಗೂ ಸ್ವಾವಲಂಭಿ ಬದುಕಿಗಾಗಿ ಪಶುಪಾ ಲನೆ ಇಲಾಖೆಯಿಂದ ವೈಜ್ಞಾನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ ನೀಡಲಾಗುತ್ತಿದ್ದು, ಬಂದಿಗಳು ಈ ತರಬೇತಿಯ ಸದುಪಯೋಗ ಪಡೆಯಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಉಪನ್ಯಾಸ ಕರಾಗಿ ಆಗಮಿಸಿ ಮಾತನಾಡಿದ ಮುಖ್ಯ ಪಶು ವೈದ್ಯಾಧಿಕಾರಿಗಳಾದ ಡಾ. ಶರಣಬಸಪ್ಪ ನಿಂಗದಹಳ್ಳಿ ಹಾಗೂ ಡಾ. ವಿಜಯಕುಮಾರ ತೆಲಗಾರ ಅವರು, ಕರ್ನಾಟಕದಲ್ಲಿ 5 ತಳಿಯ ಕುರಿಗಳು ಅಲ್ಲದೇ ದೇಶಿಯ ತಳಿಯ ಮೇಕೆಗಳನ್ನು ಸಾಕಲಾಗುತ್ತಿ ದೆ. ಕುರಿ ಸಾಕಾಣಿಕೆಯು ವರ್ಷವಿಡಿ ನೀಡುವ ಉದ್ಯೋಗ ಇದಾಗಿದೆ. ಕುರಿ ಸಾಕಾಣಿಕೆಯು ಕಡಿಮೆ ಶ್ರಮ ಅಧಿಕ ಲಾಭವನ್ನು ತಂದುಕೊಡಲಿದ್ದು, ಈ ಕುರಿ ಸಾಕಾಣಿಕೆಯ ಬಗ್ಗೆ ತರಬೇತಿ ಪಡೆದು ಇದರ ಲಾಭ ಪಡೆಯಬೇಕು ಎಂದರು.

ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಲಬುರಗಿ ಕೇಂದ್ರ ಕಾರಾಗೃಹದ ಅಧೀಕ್ಷಕ ಕೆ. ಸುರೇಶ್ ಅವರು, ಕುರಿ ಸಾಕಾಣಿಕೆ ಇಂದು ಒಂದು ಅತ್ಯುತ್ತಮ ಲಾಭ ದಾಯಕ ಕೃಷಿ ಉಪ ಕಸುಬು ಆಗಿದೆ. ಕಡಿಮೆ ಹೂಡಿಕೆ ಮತ್ತು ಹೆಚ್ಚು ಲಾಭ ಪಡೆಯಬಹುದಾಗಿದೆ ಎಂದರು.

ಈ ತರಬೇತಿಯಲ್ಲಿ ಭಾಗವಹಿಸಿದ ಬಂದಿಗಳಿಗೆ ವೈಜ್ಞಾನಿಕ ಕುರಿ ಮತ್ತು ಮೇಕೆ ಸಾಕಾಣಿಕೆಯ ತರಬೇತಿಯ ಕೈಪಿಡಿ ಹಾಗೂ ಹಣ್ಣುಗಳನ್ನು ವಿತರಿಸಲಾಯಿತು. ಈ ಸಂಸ್ಥೆಯ ಅಧೀಕ್ಷಕ ರಾಕೇಶ್ ಕಾಂಬಳೆ, ವೈದ್ಯಾಧಿಕಾರಿಗಳಾದ ಹಾಗೂ ಸಹಾಯಕ ಅಧೀಕ್ಷಕ ಚನ್ನಪ್ಪ ಯಟಗಲ್, ಭೀಮಾಶಂಕರ್ ಡಾಂಗೆ, ಸಹಾಯಕ ಆಡಳಿತಾಧಿಕಾ ರಿಗಳು, ಜೈಲರ್ ಆದ ಸಾಗರ್ ಪಾಟೀಲ ಹಾಗೂ ಫಾರುಖ್ ಸಿಬ್ಬಂದಿಗಳು ಪಾಲ್ಗೊಂಡಿದರು. ಈ ಸಂಸ್ಥೆಯ ಶಿಕ್ಷಕರಾದ ನಾಗರಾಜ ಮುಲಗೆ ಅವರು ಕಾರ್ಯಕ್ರಮದ ನಿರೂಪಿಸಿ, ಕೊನೆಯಲ್ಲಿ ವಂದಿಸಿದರು.

ಮೊದಲನೇ ಪುಟದಿಂದ

ಹಟ್ಟಿ ಚಿನ್ನದ ಗಣಿ ಕಂಪನಿ ಮುಖ್ಯದ್ವಾರದ ಬಳಿ ಸ್ಫೋಟಕಗಳು ವಸ್ತುಗಳು ಪತ್ತೆ ?

ವಸ್ತುಗಳನ್ನು ಯಾರೋ ಅಕ್ರಮವಾಗಿ ಸಾಗಿಸುತ್ತಿದ್ದ ವೇಳೆ ಅವುಗಳು ವಾಹನದಿಂದ ಬಿದ್ದಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ. ಸ್ಫೋಟಕ ವಸ್ತುಗಳ ಮೂಲ ಮತ್ತು ಸಾಗಾಣಿಕೆ ಕುರಿತು ಪೊಲೀಸರು ಮಾಹಿತಿ ಸಂಗ್ರಹಿಸುತ್ತಿದ್ದಾರೆ.

ಸ್ಫೋಟಕ ವಸ್ತುಗಳು ಪತ್ತೆಯಾದ ಹಿನ್ನಲೆಯಲ್ಲಿ ಜನರಲ್ಲಿ ಆತಂಕ ಹೆಚ್ಚಾಗಿದ್ದು, ಈ ಸಂಬಂಧ ಗಣಿ ಆಡಳಿತ ಮಂಡಳಿ ಗಣಿ ವ್ಯಾಪ್ತಿಯ ಸುತ್ತಮುತ್ತ ಬಿಗಿ ಭದ್ರತೆಯನ್ನು ಏರ್ಪಡಿಸಿದೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯತ್ವ ನವೀಕರಣ ಹಾಗೂ ಹೊಸ ಸದಸ್ಯತ್ವಕ್ಕೆ ಅರ್ಜಿ ಆಹ್ವಾನ: ಆರ್ ಗುರುನಾಥ

ಮೊತ್ತವನ್ನು ಜಿಲ್ಲಾ ಸಮಿತಿಗೆ ರವಾನಿಸಬೇಕು. ಹೊಸದಾಗಿ ಅರ್ಜಿ ಸಲ್ಲಿಸುವವರು ಎಸ್ಎಸ್ಎಲ್ಸಿ ತೇರ್ಗಡೆ ಪ್ರಮಾಣ ಪತ್ರ ಲಗತ್ತಿಸಬೇಕು. ಜತೆಗೆ ಕನಿಷ್ಠ ಎರಡು ವರ್ಷ ಸೇವಾನುಭವ ಹೊಂದಿರುವ ಕುರಿತು ಸಂಸ್ಥೆಗಳಿದ ದೃಢಿಕರಣ ಪತ್ರ ಸಲ್ಲಿಸಬೇಕು. ಸದಸ್ಯತ್ವ ನೀಡುವ ವಿಚಾರದಲ್ಲಿ ರಾಜ್ಯ ಸಮಿತಿ ಸೂಚಿಸಿದ ಎಲ್ಲ ಮಾನದಂಡಗಳನ್ನು ಕಡ್ಡಾಯವಾಗಿ ಪಾಲಿಸಲಾಗುವುದು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಆರ್.ಗುರುನಾಥ, ಪ್ರಧಾನ ಕಾರ್ಯದರ್ಶಿ ಸಿದ್ದಯ್ಯಸ್ವಾಮಿ ಕುಕನೂರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕುಲಬಹಿಷ್ಕಾರದಿಂದ ಸಂಕಷ್ಟದಲ್ಲಿರುವ ಕುಟುಂಬ: ಕ್ರಮಕ್ಕೆ ಜಿಲ್ಲಾಡಳಿತಕ್ಕೆ ಮನವಿ

ಆದೇಶಿಸಿರುವುದರಿಂದ ಮಕ್ಕಳ ವಿದ್ಯಾಭ್ಯಾಸಕ್ಕೂ ತೊಂದರೆ ಉಂಟಾಗಿದೆ. ಸಮಾಜದವರು ಮಾತನಾಡದೇ ಇರುವುದರಿಂದ ಮಕ್ಕಳಿಗೆ ಮಾನಸಿಕ ಒತ್ತಡ ಹೆಚ್ಚಾಗಿದೆ ಎಂದು ಅವರು ಹೇಳಿದರು.

ಇತ್ತೀಚೆಗೆ 28, 29 ಹಾಗೂ 30-01-2026 ರಂದು ದೇವಸ್ಥಾನ ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮಕ್ಕೆ ಆಹ್ವಾನಿಸಿದ ಸಮಾಜದವರು, 23-02-2026 ರಂದು ದೇವಸ್ಥಾನಕ್ಕೆ ಹೋದಾಗ ಮತ್ತೆ ಬರಬಾರದು ಎಂದು ಜೀವ ಬೆದರಿಕೆ ಹಾಕಿರುವುದಾಗಿ ಆರೋಪಿಸಿದರು. ಈ ಕುರಿತು ಸಮಾಜದ ಹಿರಿಯರಿಗೆ ಮನವಿ ಮಾಡಿದರೂ ಸ್ಪಂದನೆ ದೊರಕಿಲ್ಲ ಎಂದು ಹೇಳಿದರು.

ಈ ಹಿನ್ನೆಲೆಯಲ್ಲಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿರುವ ಅವರು, ಕುಲಬಹಿಷ್ಕಾರ ವಿಧಿಸಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು, ಸಮಾಜದ ಸಭೆ ಕರೆದು ಸಮಸ್ಯೆಗೆ ಪರಿಹಾರ ನೀಡಬೇಕು, ಮನೆ ನಿರ್ಮಾಣಕ್ಕೆ ಸಹಾಯ ಮಾಡಬೇಕು, ಮಕ್ಕಳ ವಿದ್ಯಾಭ್ಯಾಸಕ್ಕೆ ಆರ್ಥಿಕ ನೆರವು ನೀಡಬೇಕು ಹಾಗೂ ಕುಲ ಕಸುಬು ವೃತ್ತಿಗೆ ಸಾಲ ಮಂಜೂರು ಮಾಡಬೇಕು ಎಂದು ಒತ್ತಾಯಿಸಿದರು. ಜೊತೆಗೆ ಸಾಮಾಜಿಕ ಕುಲಬಹಿಷ್ಕಾರ ನಿಷೇಧ ಕಾನೂನಿನಡಿ ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು.

ತಮಗೆ ಸುರಕ್ಷಿತ ಜೀವನ ಮತ್ತು ಸಾಮಾಜಿಕ ನ್ಯಾಯ ದೊರಕುವಂತೆ ಜಿಲ್ಲಾಡಳಿತ ಮಧ್ಯಪ್ರವೇಶಿಸಬೇಕೆಂದು ಅವರು ಆಗ್ರಹಿಸಿದರು.

ವಿವಿಧ ಬೇಡಿಕೆಗಳ ಪರಿಹಾರಕ್ಕಾಗಿ ಪ್ರಾಂತ ರೈತ ಸಂಘ ಧರಣಿ

ಗ್ರಾಮದಲ್ಲಿ ಮನೆಗಳ ಮೇಲೆ ಹಾದುಹೋಗಿರುವ 11 ಕೆವಿ ವಿದ್ಯುತ್ ತಂತಿಗಳನ್ನು ತೆರವುಗೊಳಿಸಿ, ಟ್ರಾನ್ಸ್ ಫಾರ್ಮರ್ ಸ್ಥಳಾಂತರಿಸಬೇಕು ಎಂದು ಮನವಿ ಮಾಡಿದರು.

ಬಾಕ್ಸ್

(ಧರಣಿ ಸ್ಥಳಕ್ಕೆ ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕಿ ಮಹೇಶ್ವರಿ ಅವರು ಸ್ಥಳಕ್ಕೆ ಭೇಟಿ ನೀಡಿ ಕೆಲವೊಂದು ಸಮಸ್ಯೆ ಕುರಿತು ಪ್ರತಿಭಟನಾಕಾರರ ಜೊತೆ ಚರ್ಚಿಸಿದರು ಬಳಿಕ ಪ್ರತಿಭಟನಾಕಾರರು ಒಪ್ಪದ ಕಾರಣ ಮಾರ್ಚ್ 5 ರಂದು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಇನ್ನಿತರ ಸಮಸ್ಯೆಗೆ ಸಂಬಂಧಿಸಿದ ಅಧಿಕಾರಿಗಳ ಸಭೆ ಕರೆಯಲಾಗುವುದು ಎಂದು ಲಿಖಿತ ಭರವಸೆ ನೀಡಿದ ಮೇಲೆ ಪ್ರತಿಭಟನೆ ವಾಪಸ್ ಪಡೆದರು,)

ಇದೆ ಸಂದರ್ಭದಲ್ಲಿ ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾ ಕಾರ್ಯದರ್ಶಿ ನರಸಣ್ಣ ನಾಯಕ, ತಾಲೂಕು ಅಧ್ಯಕ್ಷ ಹನುಮಂತ ಗುರಿಕಾರ, ಮೌನೇಶ್ ದಾಸ್ರ್, ದುರ್ಗಪ್ಪ ವರಟಿ, ಮುಕ್ಕನಗೌಡ, ರಾಮನಗೌಡ, ಶಬ್ಬೀರ್ ಜಾಲಹಳ್ಳಿ, ಭೀಮಣ್ಣ ಪಂದ್ಯನ್, ಹನುಮಂತ ಮಂಡಲಗುಡ್ಡ, ದೇವಣ್ಣ ಸೂಲದಗುಡ್ಡ, ಹನುಮಂತ ಕಮಲದಿನ್ನಿ, ವಿಶ್ವ, ರಂಗನಾಥ ಬುಂಕಲದೊಡ್ಡಿ, ಹನುಮಂತ ಮಡಿವಾಳ, ಭೋಜಪ್ಪ, ರಾಜು ನಾಯಕ, ಮಹಾಲಿಂಗ ದೊಡ್ಡಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು,

ಫೆ, 28ರಂದು ವಿಚಾರ ಸಂಕಿರಣ : ಎಂ. ಗಂಗಾಧರ

ಎಂಬ ಪರಮ ಸತ್ಯವನ್ನು ಎಲ್ಲರೂ ಮನಗಾಣಬೇಕು. ಭಾರತದ ಸಾಮಾಜಿಕ ಸಂರಚನೆಯು ರಷಿಯಾ ಹಾಗೂ ಚೀನಾಕ್ಕಿಂತ ಭಿನ್ನವಾಗಿದೆ. ಇಲ್ಲಿನ ಜಾತಿ ವ್ಯವಸ್ಥೆ ವರ್ಗ ಶೋಷಣೆಯ ಅವಿಭಾಜ್ಯ ಅಂಗವಾಗಿದೆ. ವರ್ಗ ಹಾಗೂ ಜಾತಿಯನ್ನು ಯಾಂತ್ರಿಕವಾಗಿ ಪ್ರತ್ಯೇಕಿಸುವ ತಪ್ಪಾದ ಧೋರಣೆಯನ್ನು ಕಮ್ಯುನಿಸ್ಟ್ ಚಳುವಳಿಯಲ್ಲಿ ಅನುಸರಿಸಲಾಗಿದೆ. ಇದನ್ನು ತಿದ್ದಿಕೊಳ್ಳದೆ ಅಂದರೆ, ಜಾತಿ ಹಾಗೂ ವರ್ಗ ಒಂದರಿಂದ ಮತ್ತೊಂದು ಪ್ರತ್ಯೇಕಗೊಳ್ಳದ ಜಂಟಿ ಸವಾಲ್ ಎಂದು ಕಮ್ಯುನಿಸ್ಟ್ ಪಕ್ಷಗಳು ಪುನರ್ ಮನನ ಮಾಡಿಕೊಳ್ಳಬೇಕಾಗಿದೆ. ಇದಕ್ಕಾಗಿ ಮಾರ್ಕ್ಸ್ವಾದಿಗಳು ಹಾಗೂ ಅಂಬೇಡ್ಕರ ವಾದಿಗಳೊಂದಿಗೆ ಐಕ್ಯ ಹೋರಾಟ ಕಟ್ಟಲು ಅಡ್ಡ ಬರುವ ಸಮಸ್ಯೆಗಳ ಪರಿಹಾರಕ್ಕೆ ಮುಂದಾಗಬೇಕಾಗಿದೆ ಎಂದು ಹೇಳಿದರು

ಭಾರತದ ಸ್ವಾತಂತ್ರ್ಯ ಚಳುವಳಿಯಲ್ಲಿ ಕಮ್ಯುನಿಷ್ಟರ ಪಾತ್ರ ಹಾಗೂ ಜಾತಿ ನಿರ್ಮೂಲನೆಗಾಗಿ ಮಾರ್ಕ್ಸ್ ವಾದಿ ಹಾಗೂ ಅಂಬೇಡ್ಕರ್ ವಾದಿಗಳ ಐಕ್ಯತೆಯ ಸವಾಲುಗಳು ಎಂಬ ಈ ಎರಡು ಮಹತ್ವದ ರಾಷ್ಟ್ರೀಯ ವಿಷಯಗಳ ಮಂಡನೆಗಾಗಿ ಕಮ್ಯುನಿಸ್ಟ್ ಪಕ್ಷದ ಪಾಲಿಟ ಬ್ಯುರೊ ಸದಸ್ಯರಾದ ಆರ್. ಮಾನಸಯ್ಯ ಹಾಗೂ ಪಕ್ಷದ ರಾಜ್ಯ ಕಾರ್ಯದರ್ಶಿಯಾದ ಕಾಮ್ರೆಡ್ ಬಿ. ರುದ್ರಯ್ಯ ಭಾಗವಹಿಸಲಿದ್ದಾರೆ. ಉಪನ್ಯಾಸಕ ಹಾಗೂ ಪ್ರಗತಿಪರ ಚಿಂತಕ ನಾರಾಯಣ ಬೆಳಗುರ್ಕಿ ಹಾಗೂ ಸಾಮಾಜಿಕ ಹೋರಾಟಗಾರ ಹಾಗೂ ಸಾಂಸ್ಕೃತಿಕ ಚಿಂತಕ ಹೆಚ್. ಎನ್. ಬಡಿಗೇರ್ ಸಂವಾದಕರಾಗಿ ಮಾತನಾಡಲಿದ್ದಾರೆ. ಪಕ್ಷದ ರಾಯಚೂರು ಜಿಲ್ಲಾ ಕಾರ್ಯದರ್ಶಿ ಎಂ ಡಿ ಅಮೀರ ಅಲಿ ಅಧ್ಯಕ್ಷತೆ ವಹಿಸಲಿದ್ದಾರೆ ಎಂದರು

ತಾಲ್ಲೂಕಿನ ಪ್ರಗತಿಪರ ಸ್ನೇಹಿತರು, ವಿವಿಧ ಕಮ್ಯುನಿಸ್ಟ್ ಪಕ್ಷಗಳ ಹಾಗೂ ವಿವಿಧ ದಲಿತ ಸಂಘಟನೆಗಳ ಚಿಂತಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ವಿಚಾರ ಸಂಕಿರಣವನ್ನು ಯಶಸ್ವಿಗೊಳಿಸಬೇಕೆಂದು ವಿನಂತಿಸಿದರು

ಈ ಸಂದರ್ಭದಲ್ಲಿ ಸಿಪಿಐ (ಎಂಎಲ್) ರೆಡ್ ಸ್ಟಾರ್ ಪಾರ್ಟಿ ಜಿಲ್ಲಾ ಸಮಿತಿ ಸದಸ್ಯ ಆದೇಶ ಹಿರೇನಗನೂರ, ಯಲ್ಲಪ್ಪ ಊಟಕನೂರ, ಹೆಚ್. ಆರ್. ಹೊಸಮನಿ, ತಾಲೂಕು ಸಮಿತಿ ಮುದಿಯಪ್ಪ. ಹೆಚ್. ಎನ್. ಕ್ಯಾಂಪ್ ಸೇರಿದಂತೆ ಇತರರು ಉಪಸ್ಥಿತರಿದ್ದರು

ಚನ್ನರಾಯಪಟ್ಟಣ ನಾಲ್ಕು ವರ್ಷಗಳ ಹೋರಾಟಕ್ಕೆ ಜಯ; ಭೂಮಿ ಹಬ್ಬದ ಸಂಭ್ರಮದಲ್ಲಿ ರೈತರು

ಸತತವಾಗಿ ನಾಲ್ಕು ವರ್ಷಗಳ ಕಾಲ ದೇವನಹಳ್ಳಿ ಚನ್ನರಾಯಪಟ್ಟ ಭೂ ಸ್ವಾಧೀನ ವಿರುದ್ಧ ಹೋರಾಟ ಯಶಸ್ವಿಯಾಗಿ ನಡೆದು ಕೊನೆಗೂ ಸರ್ಕಾರ ಭೂ ಸ್ವಾಧೀನ ಆದೇಶ ವಾಪಾಸ್ ಪಡೆಯುವ ತನಕ ಹೋರಾಟ ಮುಂದುವರೆಯಿತು ಚನ್ನರಾಯಪಟ್ಟಣ ರೈತರ ಹೋರಾಟಕ್ಕೆ ದೇವನಹಳ್ಳಿ ಅಲ್ಲದೆ ಕರ್ನಾಟಕ ರಾಜ್ಯದ ಹಾಗೂ ದೇಶದ ಹಲವಾರು ಪ್ರಗತಿಪರ ಸಂಘಟನೆಗಳು ಬೆಂಬಲ ನೀಡಿದ್ದವು.

13 ಹಳ್ಳಿಗಳ ಹೋರಾಟ ಯಶಸ್ವಿಯಾದ ಹಿನ್ನೆಲೆಯಲ್ಲಿ ನಾಳೆ (ಫೆ.27) ಚನ್ನರಾಯಪಟ್ಟಣ ನಾಲ್ಕು ವರ್ಷಗಳ ಕಾಲ ಹೋರಾಟ ಮಾಡಿದ ಸ್ಥಳದಲ್ಲೇ ಭೂಮಿ ಪೂಜೆ ಮೂಲಕ ವಿಜಯೋತ್ಸವವನ್ನು ಆಚರಣೆ ಮಾಡಿ ಹೋರಾಟಕ್ಕೆ ಬೆಂಬಲ ನೀಡಿದ ಎಲ್ಲಾ ಹೋರಾಟಗಾರರಿಗೆ ಕೃತಜ್ಞತೆ ಸಲ್ಲಿಸಲು ವಿಜಯೋತ್ಸವ ಆಚರಣೆ ಮಾಡುತ್ತಿದ್ದಾರೆ.

ಭೂವಿ ಹಬ್ಬದ ಸಂಭ್ರಮದಲ್ಲಿ ರೈತರು

ಈ ದಿನ.ಕಾಮ್ ಗೆ ಪ್ರತಿಕ್ರಿಯೆ ನೀಡಿದ ಹೋರಾಟಗಾರ ರಮೇಶ್, ''ಕಳೆದ ನಾಲ್ಕು ವರ್ಷಗಳಿಂದ ಭೂ ಸ್ವಾಧೀನ ಮಾಡಲು ಮುಂದಾದ ಸರ್ಕಾರ ಹಾಗೂ ಕೆಐಎಡಿಬಿ ವಿರುದ್ದ ರೈತರು ಹೋರಾಟ ಪ್ರಾರಂಭ ಮಾಡಿದರು. ಕಳೆದ ವರ್ಷ ಜುಲೈನಲ್ಲಿ ರಾಜ್ಯ ಸರ್ಕಾರ ಭೂ ಸ್ವಾಧೀನ ಆದೇಶ ವಾಪಾಸ್ ಪಡೆಯುತ್ತೇವೆ ಎಂದು ಹೇಳಿತ್ತು. ಡಿಸೆಂಬರ್ 2025 ರಲ್ಲಿ ಭೂ ಸ್ವಾಧೀನ ಆದೇಶ ವಾಪಾಸ್ ಪಡೆದಿದ್ದೇವೆ ಎಂದು ಸರ್ಕಾರ ಆದೇಶ ಹೊರಡಿಸಿತು. ಈ ಖುಷಿಯಲ್ಲಿ ರೈತರು ಭೂಮಿ ಹಬ್ಬದ ಮೂಲಕ ಸಂಭ್ರಮಾಚರಣೆ ಮಾಡುತ್ತಿದ್ದಾರೆ. ಭೂಮಿ ಹಬ್ಬ ಸಂಭ್ರಮಾಚರಣೆಯಲ್ಲಿ ಮೊದಲಿಗೆ ಭೂಮಿ ಪೂಜೆ ಇರುತ್ತದೆ ನಂತರ ನಮ್ಮ ನಾಲ್ಕು ವರ್ಷಗಳ ಹೋರಾಟಕ್ಕೆ ಯಾರೆಲ್ಲಾ ಬೆಂಬಲ ನೀಡಿದ್ರು, ಅವರಿಗೆ ಗೌರವ ಸಮರ್ಪಣೆ ಇರುತ್ತೆ ಹಾಗೂ ಧನ್ಯವಾದ ಹೇಳುತ್ತೇವೆ ಇದಾದ ಬಳಿಕ ಭಾಷಣ, ಹಾಡು ಆಟ'' ಇರುತ್ತದೆ ಎಂದು ವಿವರಿಸಿದರು.

''ಹಿಂದೆ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಇರುವಾಗ ಭೂ ಸ್ವಾಧೀನ ಆದೇಶ ಮಾಡುತ್ತಾರೆ. ಅದನ್ನು ವಿರೋಧಿಸಿ ಆಗಿನ ಕಾಲದಲ್ಲಿ ಪ್ರತಿಭಟನೆ ಪ್ರಾರಂಭವಾಗುತ್ತೆ. ಅದರ ಮಧ್ಯೆ ಸಿದ್ದರಾಮಯ್ಯ ನವರು ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ್ರೆ ವಾಪಸ್ ಪಡೆಯುತ್ತೇವೆ ಎಂದು ಹೇಳ್ತಾರೆ. ನಮ್ಮ ಹೋರಾಟದ ನಾಲ್ಕು ವರ್ಷದಲ್ಲಿ ಒಂದುವರೆ ವರ್ಷ ಬಿಜೆಪಿ ಸರ್ಕಾರವೇ ಅಧಿಕಾರದಲ್ಲಿ ಇರುತ್ತೆ. ಬಳಿಕ ಕಾಂಗ್ರೆಸ್ ಸರ್ಕಾರ ಬಂದ್ರೂ ಕೂಡ ಎರಡು ವರ್ಷ ಯಾವುದೇ ನಿರ್ಧಾರಕ್ಕೆ ಬರುವುದಿಲ್ಲ. ಆಗಲೂ ಸಹ ಸಚಿವರ ಜೊತೆಗೆ ಸಭೆ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ನವರ ಜೊತೆಯೂ ಹಲವಾರು ಸಭೆಗಳಾಗುತ್ತವೆ. ಆದರೂ ಯಾವುದೇ ಪ್ರಯೋಜನವಾಗುವುದಿಲ್ಲ. ಸದ್ಯ ಈಗ ನಮ್ಮ ಹೋರಾಟಕ್ಕೆ ಜಯ ಸಿಕ್ಕಿರುವುದು ಸಂತಸ ತಂದಿದೆ'' ಎಂದರು.

ಏನಿದು ಹಿನ್ನೆಲೆ?

ರಾಜ್ಯದಲ್ಲಿ ಬಸವರಾಜ್ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದ ಸಂದರ್ಭದಲ್ಲಿ ದೇವನಹಳ್ಳಿ ವ್ಯಾಪ್ತಿಯ ಚನ್ನರಾಯಪಟ್ಟಣ ಸೇರಿದಂತೆ ಸುಮಾರು 13 ಹಳ್ಳಿಗಳ 1700ಕ್ಕೂ ಹೆಚ್ಚು ಎಕರೆ ಜಾಗವನ್ನು ಕೆಐಎಡಿಬಿ ಮೂಲಕ ಭೂ ಸ್ವಾಧೀನ ಪಡಿಸಿಕೊಳ್ಳಲು ಮುಂದಾಗಿತ್ತು. ಅಂದಿನಿಂದಲೂ ಭೂ ಸ್ವಾಧೀನಕ್ಕೆ ವಿರೋಧ ಮಾಡಿ ನಮ್ಮ ಫಲವತ್ತಾದ ಭೂಮಿ ಕೆಐಎಡಿಬಿ ಗೆ ನೀಡುವುದಿಲ್ಲ ಎಂದು ರೈತರು ಧರಣಿ ಪ್ರಾರಂಭ ಮಾಡಿದ್ದರು. ರಾಜ್ಯದ ಪ್ರಗತಿಪರ ಸಂಘಟನೆಗಳ ಮುಖಂಡರು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಹೋರಾಟ ಮಾಡುವ ಸಂದರ್ಭದಲ್ಲಿ ಅಂದಿನ ವಿರೋಧ ಪಕ್ಷದ ನಾಯಕರಾಗಿದ್ದ ಸಿದ್ದರಾಮಯ್ಯ ನವರು ಚನ್ನರಾಯಪಟ್ಟಣ ರೈತರಿಗೆ ಕಾಂಗ್ರೆಸ್ ಸರ್ಕಾರ ಬಂದರೆ ಭೂ ಸ್ವಾಧೀನ ಆದೇಶ ವಾಪಸ್ ಪಡೆಯುತ್ತೇವೆ ಎಂದು ನಂತರ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದು ಸಿದ್ದರಾಮಯ್ಯನವರೇ ಸಿಎಂ ಆದ್ರೂ ಸಹ ಎರಡು ವರ್ಷ ಕಳೆದರೂ ರೈತರ ಸಮಸ್ಯೆ ಬಗೆಹರಿಸಲಿಲ್ಲ. ರಾಜ್ಯದ ಪ್ರಗತಿಪರ ಸಂಘಟನೆಗಳು, ಚಿಂತಕರು ಸುಮಾರು ಬಾರಿ ಸಿಎಂ ಬಳಿ ಸಭೆ ಮಾಡಿದರೂ ಸಹ ಭೂ ಸ್ವಾಧೀನ ಆದೇಶ ವಾಪಸ್ ಪಡೆಯಲಿಲ್ಲ. ಆದರೂ ಸಹ ಛಲ ಬಿಡದೆ ರೈತರು ಹೋರಾಟವನ್ನು ಮುಂದುವರೆಸಿದರು.

ಸಂಯುಕ್ತ ಹೋರಾಟ ರಂಗ ಮೂಲಕ ಎಲ್ಲಾ ರೈತಪರ, ಕನ್ನಡಪರ, ದಲಿತಪರ, ಹಾಗೂ ಹಲವಾರು ರಾಜಕೀಯ ಪಕ್ಷಗಳು, ಚಿಂತಕರು ಸೇರಿ ದೇವನಹಳ್ಳಿ ಚಲೋ ಬೃಹತ್ ಹೋರಾಟ ಹಮ್ಮಿಕೊಂಡು ಸರ್ಕಾರದ ವಿರುದ್ಧ ಕಹಳೆ ಮೊಳಗಿಸಿದರು. ಈ ಹೋರಾಟಕ್ಕೆ ನಟ ಪ್ರಕಾಶ್ ರೈ ಕೂಡ ಬೆಂಬಲ ವ್ಯಕ್ತಪಡಿಸಿದರು. ಹಲವಾರು ಮುಖಂಡರು ದೇವನಹಳ್ಳಿ ಚಲೋ ಹೋರಾಟದಲ್ಲಿ ಬಂಧನ ಸಹ ಆಗಿದ್ರು. ತದನಂತರ ಸರ್ಕಾರ ಎಚ್ಚೆತ್ತುಕೊಂಡು ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ ನವರೇ ಚನ್ನರಾಯಪಟ್ಟಣ ರೈತರು ಹಾಗೂ ಪ್ರಗತಿಪರ ಸಂಘಟನೆಗಳ ಮುಖಂಡರ ಸಭೆ ಕರೆದು ಭೂ ಸ್ವಾಧೀನ ಆದೇಶ ವಾಪಸ್ ಪಡೆಯುತ್ತೇವೆ ಎಂದು ಘೋಷಣೆ ಮಾಡಿದರು.

ಅಂತೂ ವರ್ಷಗಳ ನಿರಂತರ ಹೋರಾಟಕ್ಕೆ ಕೊನೆಗೂ ಜಯ ಸಿಕ್ಕಿದೆ. ಆ ಸಂತಸವನ್ನು ಭೂಮಿ ಪೂಜೆ ಮಾಡುವ ಮೂಲಕ ರೈತರು ಸಂಭ್ರಮ ಹಂಚಿಕೊಳ್ಳಲಿದ್ದಾರೆ. ರೈತರು ಹೋರಾಟಕ್ಕಿಳಿದರೆ ಜಯ ಸಿಗುವವರೆಗೂ ಬಿಡುವುದಿಲ್ಲ ಎನ್ನುವ ಸಂದೇಶವನ್ನು ನೀಡಲು ಸಹಕರಿಸಿದ ಎಲ್ಲರಿಗೂ ಈ ವೇಳೆ ಧನ್ಯವಾದ ಅರ್ಪಿಸಲಿದ್ದಾರೆ.

ಮಲೆನಾಡಿನ ಅಡಕೆ ಬೆಳೆ ಇಳುವರಿ ಕುಂಠಿತ: ಸಂಕಷ್ಟದಲ್ಲಿರುವ ಬೆಳೆಗಾರರ ಕೈ ಹಿಡಿಯುವುದೇ ಸರ್ಕಾರ?

ಮಲೆನಾಡು ರೈತರು ಶ್ರಮಜೀವಿಗಳು. ಅಡಕೆ ಅವರ ಜೀವನಾಧಾರ. ರೋಗ ನಿಯಂತ್ರಣಕ್ಕೆ ವೈಜ್ಞಾನಿಕ ಪರಿಹಾರ, ಸಬ್ಸಿಡಿ, ವಿಮೆ, ಮಾರುಕಟ್ಟೆ ಸ್ಥಿರತೆಯೂ ಮುಖ್ಯವಾಗಬಹುದು. ಅಡಕೆ ಇಳುವರಿ ಕುಸಿತ ರಾಜ್ಯದ ಗ್ರಾಮೀಣ ಆರ್ಥಿಕತೆಯನ್ನು ಕುಗ್ಗಿಸುತ್ತದೆ. ಇದು ಕೇವಲ ರೈತರ ಸಮಸ್ಯೆಯಲ್ಲ, ರಾಜ್ಯದ ಸಮಗ್ರ ಅಭಿವೃದ್ಧಿಯ ಸವಾಲು.

ಕರ್ನಾಟಕವು ಭಾರತದ ಅಡಕೆ ಬೆಳೆಯಲ್ಲಿ ಅಗ್ರಸ್ಥಾನದಲ್ಲಿದೆ. ರಾಜ್ಯದ ಮಲೆನಾಡು, ಕರಾವಳಿ ಮತ್ತು ಕೆಲವು ಒಳನಾಡು ಜಿಲ್ಲೆಗಳಲ್ಲಿ ಲಕ್ಷಾಂತರ ಕುಟುಂಬಗಳು ಅಡಕೆಯನ್ನು ನಂಬಿ ಜೀವನ ಸಾಗಿಸುತ್ತಿವೆ. ಆದರೆ ಪ್ರಸ್ತುತ ದಿನಗಳಲ್ಲಿ ಅಡಕೆ ಬೆಳೆಗಾರರು ಸಂಕಷ್ಟದಲ್ಲಿದ್ದಾರೆ. ಹಳದಿ ಎಲೆ ರೋಗ, ಎಲೆ ಚುಕ್ಕಿ ರೋಗ, ಫ್ರೂಟ್ ರಾಟ್(ಕೊಳೆ ರೋಗ) ಮತ್ತು ಹವಾಮಾನ ಬದಲಾವಣೆಯಂತಹ ಸಮಸ್ಯೆಗಳು ರೈತರನ್ನು ಕಂಗಾಲಾಗಿಸಿವೆ.

ಮಲೆನಾಡು ಅಡಕೆಯ ಹುಟ್ಟೂರು. ಇಲ್ಲಿ ಸುಮಾರು 2.64 ಲಕ್ಷ ಹೆಕ್ಟೇರ್‌ನಲ್ಲಿ ಅಡಕೆ ಬೆಳೆಯಲಾಗುತ್ತದೆ. ದೇಶದ ಒಟ್ಟು ಅಡಕೆ ಉತ್ಪಾದನೆಯಲ್ಲಿ ಶೇ.70ಕ್ಕಿಂತಲೂ ಅಧಿಕ ಪಾಲು ರಾಜ್ಯದ ಬೆಳೆಯಾಗಿದೆ. ಆದರೆ 2025-26ರಲ್ಲಿ ಶೇ.40 ರಿಂದ 50ರಷ್ಟು ಇಳುವರಿ ಕುಸಿದಿದೆ. ಇದು ಕೇವಲ ಬೆಳೆಯ ಸಮಸ್ಯೆಯಲ್ಲ, ಲಕ್ಷಾಂತರ ರೈತರ ಜೀವನೋಪಾಯಕ್ಕೆ ತೀವ್ರ ಪೆಟ್ಟು ನೀಡಿದೆ.

2025ರಲ್ಲಿ ಜುಲೈ-ಆಗಸ್ಟ್‌ನಲ್ಲಿ ಸುರಿದ ಅತಿಯಾದ ಮಳೆಯಿಂದ ಶಿವಮೊಗ್ಗ, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಉಡುಪಿ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಫ್ರೂಟ್ ರಾಟ್ ರೋಗ ತೀವ್ರವಾಗಿ ಹರಡಿತು. ಫೈಟೋಫ್ಥೋರಾ ಎರಿಕೇ ಫಂಗಸ್‌ನಿಂದ ಉಂಟಾಗುವ ಈ ರೋಗವು ಮುಗ್ಗುಲು ಕಾಯಿಗಳನ್ನು ಮುಂಚಿತವಾಗಿ ಕೊಳೆಯುವಂತೆ ಮಾಡುತ್ತದೆ. ಶಿವಮೊಗ್ಗ ಜಿಲ್ಲೆಯೊಂದರಲ್ಲಿಯೇ 49,332 ಹೆಕ್ಟೇರ್ ಪ್ರದೇಶದಲ್ಲಿ ರೋಗ ಹರಡಿ ಸುಮಾರು ₹2,537 ಕೋಟಿ ನಷ್ಟ ಉಂಟಾಗಿರುವುದಾಗಿ ಅಧಿಕಾರಿಗಳು ಅಂದಾಜಿಸಿದ್ದಾರೆ.

ಚಿಕ್ಕಮಗಳೂರಿನಲ್ಲಿ 21,304 ಹೆಕ್ಟೇರ್ ಅಡಕೆ ಬೆಳೆ ಪ್ರದೇಶವಾಗಿದ್ದು, ಸುಮಾರು 90,000 ಹೆಕ್ಟೇರ್ ಪ್ರದೇಶವನ್ನು ಹಳದಿ ಎಲೆ ರೋಗ ಮತ್ತು ಎಲೆ ಚುಕ್ಕಿ ರೋಗಗಳು ಕಬಳಿಸಿವೆ. ಇದರಿಂದ ರೈತರು ನಿರೀಕ್ಷಿಸಿದ ಇಳುವರಿಗಿಂತ ಕಡಿಮೆ, ಅಂದರೆ ಅರ್ಧಕ್ಕೂ ಕಡಿಮೆ ಅಡಕೆ ಸಿಕ್ಕಿದೆ.

ಹವಾಮಾನ ಬದಲಾವಣೆಯು ಅಡಕೆ ಬೆಳೆಗೆ ಹೆಚ್ಚುವರಿ ಸವಾಲುಗಳನ್ನು ಸೃಷ್ಟಿಸಿದೆ. ಅತಿಯಾದ ಮಳೆ, ಉಷ್ಣತೆಯ ಏರಿಕೆ(ಕೆಲವೆಡೆ 42 ಸೆಲ್ಸಿಯಸ್‌ವರೆಗೆ), ಅನಿಯತ ಮಳೆ ಮತ್ತು ನೀರಿನ ಕೊರತೆ ಬೆಳೆಯನ್ನು ದುರ್ಬಲಗೊಳಿಸಿವೆ. ಅಡಕೆಯು ನೀರು ಹೀರಿಕೊಳ್ಳುವ ಬೆಳೆಯಾಗಿರುವುದರಿಂದ ಕರ್ನಾಟಕದ ನೀರಿನ ಸಂಕಷ್ಟದಲ್ಲಿ ಇದು ಇನ್ನಷ್ಟು ತೊಂದರೆ ನೀಡುತ್ತಿದೆ. ದಕ್ಷಿಣ ಕನ್ನಡದಲ್ಲಿ 40-50% ಇಳುವರಿ ಕುಸಿತವಾಗಿದ್ದು, ಕೆಲವು ರೈತರು ಬೆಳೆಯನ್ನೇ ಕೈಬಿಟ್ಟಿದ್ದಾರೆ. ಉಳಿದ ಕಾಯಿಗಳ ಗುಣಮಟ್ಟವೂ ಕುಸಿದು ಕೋಕಾ, ಪಟೋರಾ ಎಂಬ ಕಡಿಮೆ ಗ್ರೇಡ್‌ಗಳಿಗೆ ಸೀಮಿತವಾಗಿದೆ.

ಮಾರುಕಟ್ಟೆಯಲ್ಲಿ ಬೆಲೆಯ ಅಸ್ಥಿರತೆಯು ರೈತರನ್ನು ಕೊಂಚ ಕಷ್ಟಕ್ಕೀಡುಮಾಡಿದೆ. 2025ರ ಅಕ್ಟೋಬರ್‌ನಲ್ಲಿ ರೋಗಗಳಿಂದ ಇಳುವರಿ ಕಡಿಮೆಯಾದುದರಿಂದ ಬೆಲೆ ಏರಿಕೆಯಾಗಿ ಕ್ವಿಂಟಲ್‌ಗೆ ₹65,000ರಿಂದ ₹80,000ವರೆಗೆ ತಲುಪಿತು. ವ್ಯಾಪಾರಿಗಳು ಸಂತೋಷವಾಗಿದ್ದಾರೆ. ಆದರೆ ಈಗ ಇಳುವರಿ ಕಡಿಮೆಯಾಗಿದೆ, ರೈತರ ಬಳಿ ಬೆಳೆಯಿಲ್ಲ. ಮುಂಚಿತವಾಗಿ ಮಾರಾಟ ಮಾಡಿದ ಫಸಲಿಗೆ ಈ ಲಾಭ ಪಡೆಯಲು ಸಾಧ್ಯವಾಗಲಿಲ್ಲ. ಜತೆಗೆ 2025-26ರಲ್ಲಿ ₹1,064 ಕೋಟಿ ಮೊತ್ತದ ಅಡಕೆ(ಇಂಡೋನೇಷ್ಯಾ, ಮಲೇಷ್ಯಾ ಸೇರಿದಂತೆ) ಆಮದು ಆಗಿರುವುದು ಸ್ಥಳೀಯ ಬೆಲೆಗಳ ಮೇಲೆ ಒತ್ತಡ ಹೇರಿದೆ. ಸಸ್ತಾ ಆಮದು ಅಡಕೆಯು ಸ್ಥಳೀಯ ಡಬಲ್ ಚಾಲಿಯಂತಹ ಉತ್ತಮ ಗುಣಮಟ್ಟದ ಅಡಕೆಗೆ ಪೈಪೋಟಿ ನೀಡುತ್ತಿದೆ.

ಶಿವಮೊಗ್ಗದಲ್ಲಿ 32,124 ಎಕರೆ, ಚಿಕ್ಕಮಗಳೂರಿನಲ್ಲಿ 25,210 ಎಕರೆ, ದಕ್ಷಿಣ ಕನ್ನಡದಲ್ಲಿ 20,830 ಎಕರೆ ಪ್ರದೇಶದಲ್ಲಿ ಅಡಕೆ ಬೆಳೆಯನ್ನು ವಿಸ್ತರಿಸಲಾಗಿದೆ. ಆದರೆ ಹಳದಿ ಎಲೆ ರೋಗ() ಮತ್ತು ಕೊಳೆ ರೋಗ(/)ಗಳ ಜತೆಗೆ ಹಿಡಿಮಂಡಿಗೆ ರೋಗವೂ ಬೆಳೆಯನ್ನು ನಾಶಮಾಡುತ್ತಿದೆ.

ಮಲೆನಾಡು ಭಾಗದಲ್ಲಿ ನಿರಂತರವಾಗಿ ಸುರಿದ ಮಳೆಯಿಂದ ರೋಗ ಹರಡುತ್ತಿದ್ದು, ಇಳುವರಿ ಕುಂಠಿತವಾಗುತ್ತಿದೆ. ಮಳೆಗಾಲದಲ್ಲಿ ಔಷಧಿಗಳನ್ನು ಸಿಂಪಡಣೆ ಮಾಡಲು ಸಾಧ್ಯವಾಗದ ಕಾರಣ ರೋಗ ತೀವ್ರವಾಗಿದ್ದು, ಸಾಮಾನ್ಯವಾಗಿ ಶೇ.40-50 ಇಳುವರಿ ಕುಂಠಿತವಾದರೆ, ಕೆಲವೆಡೆ ಶೇ.95ರಷ್ಟು ಉದಾ: ಶೃಂಗೇರಿ-ಕೊಪ್ಪ ಭಾಗದಲ್ಲಿ ಅಧಿಕವಾಗಿ ಬೆಳೆ ಕುಂಠಿತಗೊಂಡಿದೆ.

ಫೆಬ್ರವರಿ 2026ರಲ್ಲಿ ಮಾರುಕಟ್ಟೆಯಲ್ಲಿ ಸುಳ್ಯ, ಪುತ್ತೂರು, ಶಿವಮೊಗ್ಗ ಮಾರುಕಟ್ಟೆಯ ಕೆಲವು ವ್ಯತ್ಯಾಸಗಳಲ್ಲಿ ಉತ್ತಮ ಗುಣಮಟ್ಟದ ಕ್ವಿಂಟಲ್ ಅಡಕೆಗೆ ₹40,000-₹48,500ಕ್ಕೆ ತಲುಪಿದೆ. ಆದರೆ ಇಳುವರಿ ಕಡಿಮೆಯಿಂದ ಒಟ್ಟು ಆದಾಯ ತುಂಬಾ ಕಡಿಮೆಯಾಗಿದೆ. ಕೂಲಿ ಕಾರ್ಮಿಕರ ಕೊರತೆಗಳಿಂದ ಫಸಲನ್ನು ಸರಿಯಾದ ಸಮಯಕ್ಕೆ ಕೈಗೆತ್ತಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಅಲ್ಲದೆ ನ ಟ್ಯಾಗ್‌ನಿಂದ ಮಾರುಕಟ್ಟೆ ಮೇಲೆ ದುಷ್ಪರಿಣಾಮ ಬೀರಿದೆ. ಅಲ್ಲದೆ ಇನ್ಸುರೆನ್ಸ್ ಪ್ರೀಮಿಯಂ ಹೆಚ್ಚಾಗಿದ್ದರೂ ಪರಿಹಾರ ಕಡಿಮೆ ಇದೆ. ಇಂತಹ ಹಲವು ಕಾರಣಗಳು ಅಡಕೆ ಬೆಳೆಗಾರರನ್ನು ಕಾಡುತ್ತಿವೆ ಎಂಬುದು ರೈತರ ಅಳಲಾಗಿದೆ.

ಅಡಕೆ ಬೆಳೆಗಾರ ಹಿಟ್ಟೂರು ರಾಜು ಅವರು ಈ ದಿನ.ಕಾಮ್‌ನೊಂದಿಗೆ ಮಾತನಾಡಿ, ''ಈ ಹಿಂದೆ ಅಡಕೆಯನ್ನು ಕೇವಲ ಮಲೆನಾಡು ಭಾಗದಲ್ಲಿ ಬೆಳೆಯಲಾಗುತ್ತಿತ್ತು. ಆದರೆ ಈಗ ಎಲ್ಲ ಕಡೆ ಅಡಕೆ ಬೆಳೆಯಲಾಗುತ್ತಿದೆ. ಆದರೂ ಉತ್ತಮ ಬೆಲೆ ಇದೆ. ಆದರೆ ರೈತರ ಬಳಿ ಬೆಳೆಯೇ ಇಲ್ಲ. ಅಡಕೆ ರೋಗಕ್ಕೆ ತುತ್ತಾಗಿದ್ದು, ಶೇ.50ರಷ್ಟು ಬೆಳೆ ನಾಶವಾಗಿ, ಇಳುವರಿ ಕುಂಠಿತವಾಗಿದೆ'' ಎಂದು ತಿಳಿಸಿದರು.

''ಅಡಕೆ ನಡುವೆ ಬೆಳೆಯುವ ಇತರೆ ಬೆಳೆಗಳ ಕಳೆ ನಿಯಂತ್ರಣಕ್ಕೆ ಸಿಂಪಡಿಸುವ ಔಷಧಿಯಿಂದ ಅಡಕೆಗೆ ಎಲೆಚುಕ್ಕಿ ರೋಗ, ಸೇರಿದಂತೆ ಇತರೆ ರೋಗಗಳು ಬರಲಾರಂಭಿಸಿವೆ. ಭೂಮಿಯನ್ನು ಫಲವತ್ತತೆಯಿಂದ ಇಟ್ಟುಕೊಂಡಿದ್ದೇ ಆದಲ್ಲಿ ಅಡಕೆ ರೋಗವನ್ನು ನಿಯಂತ್ರಿಸಬಹುದು'' ಎಂದರು.

ಕೃಷಿ ತಜ್ಞರು, ವಿಜ್ಞಾನಿಗಳು ಯಾವುದೇ ರೀತಿಯ ಹೊಸ ಪರಿಹಾರಗಳನ್ನು ಕಂಡುಹಿಡಿಯುವ ಕೆಲಸ ಮಾಡುತ್ತಿಲ್ಲ. ಇಂದು ಕೃಷಿ ತಜ್ಞರು ಜಮೀನುಗಳ ಬಳಿ ಬಂದು ಬೆಳೆ ಪರಿಶೀಲಿಸಿ ಗೊಬ್ಬರ, ಔಷಧಿಗಳನ್ನು ತಯಾರು ಮಾಡುತ್ತಿಲ್ಲ. ಬದಲಿಗೆ ಬ್ರಿಟಿಷರು ಬಿಟ್ಟುಹೋಗಿರುವ ಔಷಧಗಳನ್ನೇ ಇನ್ನೂ ಹೇಳಿಕೊಂಡು ಕುಳಿತಿರುವಾಗ, ರೈತರು ತಮ್ಮ ಬೆಳೆ ಉಳಿಸಿಕೊಳ್ಳಲು ಹಣ ಖರ್ಚು ಮಾಡುತ್ತಿದ್ದಾರೆ. ಪರಹಾರ ಸಿಗುತ್ತಿಲ್ಲ. ಇತ್ತ ಸರ್ಕಾರಗಳು ಹುಸಿ ಭರವಸೆ ನೀಡುತ್ತವೆಯೋ ಹೊರತು ಯಾವುದೇ ರೀತಿಯ ಪರಿಹಾರಗಳನ್ನು ನೀಡುತ್ತಿಲ್ಲ'' ಎಂದು ದೂರಿದರು.

ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ತಾಲೂಕಿನ ಕುದುರೆಮುಖ ಭಾಗದ ಭಲೇಕಡಿ ಗ್ರಾಮದಲ್ಲಿ 45 ಕುಟುಂಬಗಳ ರೈತರು ತಲೆಮಾರುಗಳಿಂದ ಅಡಕೆ ಬೆಳೆಸುತ್ತಿದ್ದಾರೆ. ಆದರೆ ಈಗ ಎಲ್ಲರೂ ನಷ್ಟದಲ್ಲಿದ್ದಾರೆ. ಅಂಥೋನಿ ಅವರು 1991ರಲ್ಲಿ 20 ಎಕರೆ ಖರೀದಿಸಿದ್ದರು. ಈ ಜಮೀನಿನಿಂದ ಹಿಂದೆ 100 ಕ್ವಿಂಟಲ್ ಅಡಕೆ ಫಸಲು ಬರುತ್ತಿತ್ತು. ಈಗ ಕೇವಲ 4 ಕ್ವಿಂಟಲ್‌ಗೆ ಬಂದು ತಲುಪಿದೆ ಎಂಬ ಸಂಕಟ ವ್ಯಕ್ತಪಡಿಸಿದ್ದಾರೆ.

ಅಡಕೆ ಬೆಳೆಗಾರರಾದ ವೆಂಕಟೇಶ್ ಅವರು ಈ ದಿನ.ಕಾಮ್‌ನೊಂದಿಗೆ ಮಾತನಾಡಿ, ''ಅಡಕೆಗೆ ಈ ಹಿಂದೆ ತೊಂಡೆರೋಗ ಬರುತ್ತಿತ್ತು. ಇದು ವಯಸ್ಸಾದ ಮರಗಳಿಗೆ ಬರುತ್ತಿತ್ತು, ಕ್ರಮೇಣವಾಗಿ ಫಸಲು ಕಡಿಮೆ ಆಗುತ್ತಿತ್ತು. ಆದರೆ ಈಗ ಜಾಗತಿಕ ತಾಪಮಾನ ಬದಲಾವಣೆಯಿಂದಾಗಿ ಹಳದಿ ಎಲೆ ಮತ್ತು ಎಲೆ ಚುಕ್ಕೆ ರೋಗಗಳು ಆವರಿಸಿಕೊಳ್ಳುತ್ತಿವೆ. ಇದರಿಂದ ಸಂಪೂರ್ಣ ಅಡಕೆ ತೋಟವೇ ಹಾನಿಯಾಗಿದೆ. ಶೇ.40ರಷ್ಟು ಫಸಲು ಕಡಿಮೆಯಾಗುತ್ತಿದೆ'' ಎಂದು ಹೇಳಿದರು.

''ಎಲೆ ಚುಕ್ಕೆ ರೋಗ ಬಂದು ಒಂದು ವರ್ಷದೊಳಗೆ ಸಂಪೂರ್ಣ ಮರಗಳೇ ನಾಶವಾಗುತ್ತಿವೆ. ಈ ನಷ್ಟದ ಹೊರೆಯನ್ನು ತಡೆಯಲಾರದೆ ಬಹುತೇಕರು ಮೆಣಸು ಬೆಳೆಗೆ ಬದಲಾಗಿದ್ದಾರೆ. ಮಲೆನಾಡು ಭಾಗದ ರೈತರಿಗೆ ಅಡಕೆ, ಮೆಣಸು, ಕಾಫಿ ಬೆಳೆಗಳೇ ವಾಣಿಜ್ಯ ಬೆಳೆಗಳು. ಆದರೆ ಈಗ ಅಡಕೆ ಬೆಳೆಗಾರರು ಬದುಕುಳಿಯುವುದೇ ಕಷ್ಟ ಎನ್ನುವಂತಾಗಿದೆ. ಬೇರೆ ಇನ್ಯಾವುದೇ ಆದಾಯವಿಲ್ಲ. ಸರಿಯಾದ ಮೂಲ ಸೌಕರ್ಯಗಳೂ ಇರುವುದಿಲ್ಲ. ಉದಾಹರಣೆಗೆ ನ್ಯಾಯಬೆಲೆ ಅಂಗಡಿಗೆ ಹೋಗಿ ಅನ್ನಭಾಗ್ಯ ಅಕ್ಕಿ ತರಬೇಕೆಂದರೆ ₹600 ಖರ್ಚಾಗುತ್ತದೆ, ಬಹುತೇಕರು ನಗರ ಪ್ರದೇಶಗಳತ್ತ ಮುಖಮಾಡುತ್ತಿದ್ದಾರೆ'' ಎಂದು ಬೇಸರ ವ್ಯಕ್ತಪಡಿಸಿದರು.

''ಮಲೆನಾಡು ಪ್ರದೇಶದ ಬೆಳೆಯನ್ನು ಈಗ ಬಯಲು ಸೀಮೆಗಳಲ್ಲಿಯೂ ಬೆಳೆಯಲು ಪ್ರಾರಂಭಿಸಿದ್ದಾರೆ. ಚನ್ನಗಿರಿ, ಚಿತ್ರದುರ್ಗ ಈ ಭಾಗಗಳಲ್ಲಿ ಅಡಕೆ ಬೆಳೆಯಲು ನಾಲೆ ನೀರು ಬಳಕೆಯಾಗುತ್ತಿದೆ. ಆಹಾರ ಪದಾರ್ಥಗಳನ್ನು ಬೆಳೆಯಬೇಕಾದ ಪ್ರದೇಶಗಳಲ್ಲಿ ಬಹುವಾರ್ಷಿಕ ಬೆಳೆಗಳನ್ನು ಬೆಳೆದರೆ, ಆಹಾರ ಪದಾರ್ಥಗಳ ಕೊರತೆ ಉಂಟಾಗುವ ಸಾಧ್ಯತೆ ಎದುರಾಗಬಹುದು'' ಎಂದು ಅಭಿಪ್ರಾಯಪಟ್ಟರು.

''ಸರ್ಕಾರ, ಕೃಷಿ ವಿಜ್ಞಾನಿಗಳು ಮತ್ತು ರೈತರನ್ನೊಳಗೊಂಡು ಅಡಕೆ ಬೆಳೆಯ ಸುತ್ತ ಸೂಕ್ತ ಸಂಶೋಧನೆ ನಡೆಸಿದಾಗ ಮಾತ್ರ ಏನಾದರೂ ಪರಿಹಾರ ಸಿಗಬಹುದು. ಇಲ್ಲದಿದ್ದರೆ ಅಡಕೆ ಬೆಳೆ ಸಂಪೂರ್ಣ ಹಾನಿಯಾಗುತ್ತದೆ. ಬೆಳೆಗಾರರೂ ಸಂಪೂರ್ಣವಾಗಿ ನಷ್ಟಕ್ಕೊಳಗಾಗುತ್ತಾರೆ'' ಎಂದರು.

ಕ್ಯಾಂಪ್ಕೊ(- - .) ಸಂಸ್ಥೆ 2026ರ ಜನವರಿ 24ರಂದು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದು ಟ್ಯಾಗ್ ತೆಗೆಯಲು ಮನವಿ ಮಾಡಿದೆ. ಏಕೆಂದರೆ ನೈಸರ್ಗಿಕ ಅಡಕೆಯಿಂದ ಕ್ಯಾನ್ಸರ್ ಬರುವುದಿಲ್ಲ. ಅಡಕೆಯನ್ನು ಪಾನ್-ಗುಟ್ಕಾದೊಂದಿಗೆ ತಿನ್ನುವಾಗ ಕ್ಯಾನ್ಸರ್ ಬರುತ್ತದೆ. ಆದರೆ ರೈತರಿಂದ ನೇರವಾಗಿ ಉತ್ಪನ್ನ ಖರೀದಿ ಹಿಂದೇಟು ಹಾಕಬಾರದು. ಕೊಳೆ ರೋಗದಿಂದ ಅಡಕೆ ಕಾಯಿಗಳು ಉದುರುತ್ತಿವೆ. ಈ ಬಾರಿ ಮಳೆ ಅಧಿಕವಿದ್ದ ಕಾರಣ ಔಷಧಿ ಸಿಂಪಡಿಸಲೂ ಸಾಧ್ಯವಾಗಲಿಲ್ಲ. ತೀರ್ಥಹಳ್ಳಿಯಿಂದ ಶಿವಮೊಗ್ಗದವರೆಗೆ ಈ ರೋಗ ಹರಡಿದೆ. ಕೆಲವರು ಮನೆ-ಜಮೀನು ಮಾರುತ್ತಿದ್ದಾರೆ. ಅಡಕೆ ಬೆಳೆಗಾರರಿಗೆ ಭವಿಷ್ಯವೇ ಇಲ್ಲ ಎನ್ನಿಸುತ್ತಿದೆ ಎಂಬುದು ಅಡಕೆ ಬೆಳೆಗಾರರ ಆತಂಕವಾಗಿದೆ.

ಅಡಕೆಯನ್ನು ಯು ಕಾರ್ಸಿನೋಜೆನಿಕ್ ಟು ಹ್ಯೂಮನ್ಸ್'(ಗ್ರೂಪ್ 1) ಎಂದು ವರ್ಗೀಕರಿಸಿರುವುದು ಬೇಡಿಕೆ ಕುಸಿಯುವಂತೆ ಮಾಡಿದೆ. ಪಾನ್, ಗುಟ್ಕಾ, ಪಾನ್ ಮಸಾಲಾದಲ್ಲಿ ಬಳಕೆಯಾಗುವುದರಿಂದ ಈ ಲೇಬಲ್ ಬಂದಿದೆಯಾದರೂ ರೈತರು ಅರೆಕೋಲೈನ್(ಗ್ರೂಪ್ 2) ಜತೆಗೆ ಸಮಾನವಾಗಿ ಮರುವರ್ಗೀಕರಣಕ್ಕೆ ಕೇಂದ್ರ ಸರ್ಕಾರವನ್ನು ಒತ್ತಾಯಿಸುತ್ತಿದ್ದಾರೆ. ಇದು ಮಾರುಕಟ್ಟೆಯನ್ನು ಮತ್ತಷ್ಟು ಸಂಕುಚಿತಗೊಳಿಸಿದೆ. ಸಣ್ಣ ಮತ್ತು ಅಲ್ಪಸ್ಥಳೀಯ ರೈತರು(85% ಬೆಳೆಗಾರರು) ಈ ಎಲ್ಲ ಸಮಸ್ಯೆಗಳಿಂದ ತತ್ತರಿಸಿದ್ದಾರೆ.

ಬೆಳೆ ವಿಮೆಯ ಸಮಸ್ಯೆಯೂ ಗಂಭೀರವಾಗಿದೆ. ಹವಾಮಾನ ಆಧರಿತ ಬೆಳೆವಿಮೆ() ಅಡಿಯಲ್ಲಿ ಅನೇಕ ರೈತರು ಹೆಚ್ಚು ಬೆಳೆ ವಿಮೆ ಕಟ್ಟಿದರೂ ಪರಿಹಾರ ಸಿಗದೆ ಹಪಹಪಿಸುತ್ತಿದ್ದಾರೆ. 2024-25ರಲ್ಲಿ ₹472 ಕೋಟಿ ಇನ್ಸುರೆನ್ಸ್ ಪರಿಹಾರ ನೀಡಲಾಗಿತ್ತು. ಇನ್ಸುರೆನ್ಸ್ ನಲ್ಲಿ ₹47,000-48,000 ಪ್ರೀಮಿಯಂ ಕಟ್ಟಿದ್ದಾರೆ, ಆದರೆ ಕೇವಲ ₹2,800 ಪರಿಹಾರ ನೀಡಲಾಗಿದೆ. ರೋಗ ನಿಯಂತ್ರಣ, ಪೋಷಕಾಂಶ ನಿರ್ವಹಣೆ, ಇನ್ಸುರೆನ್ಸ್ ಗಾಗಿ ₹577 ಕೋಟಿ ಅನುದಾನ ನೀಡುವಂತೆ ಕೇಂದ್ರಕ್ಕೆ ಪ್ರಸ್ತಾವನೆ ಕಳುಹಿಸಿರುವುದಾಗಿ ತಿಳಿದುಬಂದಿದೆ. ಸರ್ಕಾರವು ಎಲೆ ಚುಕ್ಕಿ ರೋಗ ನಿಯಂತ್ರಣಕ್ಕೆ ಎಕರೆಗೆ ₹1,500 ಸಹಾಯಧನ ನೀಡುತ್ತಿದೆಯಾದರೂ ಇದು ಸಾಕಾಗುತ್ತಿಲ್ಲ. ರೋಗ ಸಮಸ್ಯೆ ಪರಿಹಾರಕ್ಕೆ ತುರ್ತು ಕ್ರಮಗಳು ಅಗತ್ಯವಾಗಿವೆ ಎಂಬುದು ಬೆಳೆಗಾರರ ಆಗ್ರಹವಾಗಿದೆ.

ರೋಗ ನಿರೋಧಕ ತಳಿಗಳ ಅಭಿವೃದ್ಧಿ, ಏಕೀಕೃತ ಸಸ್ಯ ಸಂರಕ್ಷಣೆ, ಸಂಸ್ಕರಣಾ ಘಟಕಗಳು ಮತ್ತು ಮೌಲ್ಯವರ್ಧನೆ(ಅಡಕೆ ಎಲೆಯಿಂದ ಪ್ಲೇಟ್‌ಗಳು, ಇತರ ಉತ್ಪನ್ನಗಳು) ಅಗತ್ಯ. ನೀರಿನ ಸುಸ್ಥಿರ ಬಳಕೆ, ಇಂಟರ್‌ಕ್ರಾಪಿಂಗ್(ಮೆಣಸು, ಲೆಮನ್ ಗ್ರಾಸ್‌ನಂತಹ ಬೆಳೆಗಳು) ಮತ್ತು ರಫ್ತು ಉತ್ತೇಜನದ ಮೂಲಕ ಬೇಡಿಕೆ ಹೆಚ್ಚಿಸಬಹುದು. ಇದಕ್ಕೆ ರೈತ ಸಂಘಟನೆಗಳು, ಸರ್ಕಾರ ಮತ್ತು ವಿಜ್ಞಾನಿಗಳ ನಡುವಿನ ಸಮನ್ವಯವು ಮುಖ್ಯವಾಗುತ್ತದೆ.

ಮಲೆನಾಡು ರೈತರು ಶ್ರಮಜೀವಿಗಳು. ಅಡಕೆ ಅವರ ಜೀವನಾಧಾರ. ರೋಗ ನಿಯಂತ್ರಣಕ್ಕೆ ವೈಜ್ಞಾನಿಕ ಪರಿಹಾರ, ಸಬ್ಸಿಡಿ, ಉತ್ತಮ ವಿಮಾ ಸ್ಥಿರತೆ, ಮಾರುಕಟ್ಟೆ ಬೇಕಾಗಬಹುದು. ಅಡಕೆ ಬೆಳೆಯ ಸಂಕಷ್ಟವು ರಾಜ್ಯದ ಗ್ರಾಮೀಣ ಆರ್ಥಿಕತೆಯನ್ನೇ ಕುಗ್ಗಿಸುತ್ತಿದೆ. ಇದು ಕೇವಲ ರೈತರ ಸಮಸ್ಯೆಯಲ್ಲ, ರಾಜ್ಯದ ಸಮಗ್ರ ಅಭಿವೃದ್ಧಿಯ ಸವಾಲು. ತುರ್ತು ಗಮನ, ದೀರ್ಘಕಾಲೀನ ಯೋಜನೆಗಳು ಮತ್ತು ರೈತಸ್ನೇಹಿ ನೀತಿಗಳ ಜತೆಗೆ ಕೃಷಿ ವಿಶ್ವವಿದ್ಯಾಲಯ, ತೋಟಗಾರಿಕೆ ಇಲಾಖೆಗಳು ರೈತರಿಗೆ ಸಲಹೆಗಳನ್ನು ನೀಡುವುದರಿಂದ ಮಾತ್ರ ಇಂತಹ ಬೆಳೆಯನ್ನು ಉಳಿಸಿ ಬೆಳೆಸಬಹುದು. ಇಲ್ಲವಾದರೆ ಮಲೆನಾಡು ಮತ್ತು ಕರಾವಳಿಯ ಹಸಿರು ತೋಟಗಳು ಖಾಲಿಯಾಗುವ ಅಪಾಯ ಎದುರಾಗಬಹುದು.

ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತಕ್ಕಾಗಿ ಎನ್‌ಎಸ್‌ಪಿ ನೋಂದಣಿಗೆ ಸೂಚನೆ

ರಾಯಚೂರು ಫೆಬ್ರವರಿ 27

ಜಿಲ್ಲೆಯ ಮಾನ್ವಿ ತಾಲೂಕಿನ ವಿವಿಧ ಪ್ರೌಢಶಾಲೆಗಳಲ್ಲಿ 9 ಮತ್ತು 10 ನೇ ತರಗತಿಯಲ್ಲಿ ಪಂಗಡದ ವಿದ್ಯಾರ್ಥಿಗಳಿಗೆ ಕೇಂದ್ರ ಸರಕಾರದ ಆದೇಶದಂತೆ 2025-2026ನೇ ಸಾಲಿನ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನವನ್ನು ಮಂಜೂರಿಗೆ ನೋಂದಣಿ ಮಾಡಿಕೊಳ್ಳಬೇಕೆಂದು ಕೋರಲಾಗಿದೆ.

ಎನ್‌ಎಸ್‌ಪಿ ಓಟಿಆರ್ ನೋಂದಣಿ ಅವಶ್ಯಕವಾಗಿದ್ದು, ಈಗಾಗಲೇ ಎನ್‌ಎಸ್‌ಪಿ ಓಟಿಆರ್ ನೋಂದಣಿ ಮಾಡಲು ಬಾಕಿ ಇದ್ದ ಒಟ್ಟು 1006 ವಿದ್ಯಾರ್ಥಿಗಳಲ್ಲಿ ಈಗಾಗಲೇ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಹಕಾರದಿಂದ ಈ ಇಲಾಖೆಯ ನಿಲಯ ಪಾಲಕರು ಅಖಂಡ ಮಾನವಿ ತಾಲೂಕಿನ ಪ್ರತಿ ಶಾಲೆಗೆ ಭೇಟಿ ನೀಡಿ 9 ಮತ್ತು 10 ನೇ ತರಗತಿಯಲ್ಲಿ ಓದುತ್ತಿರುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳನ್ನು ಎನ್‌ಎಸ್‌ಪಿ ಓಟಿಆರ್ ನೋಂದಣಿ ಮಾಡಲಾಗಿರುತ್ತದೆ.

ಇನ್ನೂ ಸುಮಾರು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಎನ್‌ಎಸ್‌ಪಿ ಓಟಿಆರ್ ನೋಂದಣಿ ಕಾರ್ಯ ಬಾಕಿ ಇರುತ್ತದೆ. ಈ ವಿದ್ಯಾರ್ಥಿಗಳಿಗೆ ಭಾರತ ಸರಕಾರದ ಶಿಷ್ಯವೇತನ ಮಂಜೂರಾತಿ ಮಾಡಲು ಸಾಧ್ಯಾವಾಗಿರುವುದಿಲ್ಲ.

ಕಾರಣ ಎನ್‌ಎಸ್‌ಪಿ ಓಟಿಆರ್ ನೋಂದಣಿ ಮಾಡಲು ಬಾಕಿ ಇರುವ 9 ಮತ್ತು 10 ನೇ ತರಗತಿಯಲ್ಲಿ ಓದುತ್ತಿರುವ ಪರಿಶಿಷ್ಟ ಪಂಗಡದ ಎಲ್ಲಾ ವಿದ್ಯಾರ್ಥಿಗಳು ಕೂಡಲೇ ತಮ್ಮ ಶಾಲೆಯ ಮುಖ್ಯೋಪಾಧ್ಯಾಯರನ್ನು ಭೇಟಿ ಎನ್‌ಎಸ್‌ಪಿ ಓಟಿಆರ್ ಅನ್ನು ://../ ಮಾಡಿಸಕಬೇಕೆಂದು ಮಾನ್ವಿ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR